ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು –124

**ಪಟ್ಟಿ – ೧೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಮುಂದುವರೆದ ಉಪವೇಶನ**

**ಮಂಗಳವಾರ, ದಿನಾಂಕ : ೧೭ನೇ ಮಾರ್ಚ್, ೨೦೧೫**

---

## ಸಮೂಹ –II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

F-1-B/B

**ವಿದ್ಯುತ್ ತಂತಿಗಳಿಂದ ಆಗುತ್ತಿರುವ ಅನಾಹುತ**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೨೬೮ (೧೩೧೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಾದಚಾರಿಗಳ ಮಾರ್ಗದಲ್ಲಿ ಟ್ರಾನ್ಸ್‌ಫಾರ್ಮರ್‌ಗಳಿರುವುದರಿಂದ ವಿದ್ಯುತ್ ತಂತಿಗಳು ತಗುಲಿ ಸಾರ್ವಜನಿಕರು ಹಾಗೂ ಕಾಡು ಪ್ರಾಣಿಗಳು ದುರ್ಮರಣಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಕೆಲವು ವಿದ್ಯುತ್ ಕಂಬಗಳು ಶಿಥಿಲಗೊಂಡಿರುವುದರಿಂದ ಇವುಗಳ ದುರಸ್ಥಿ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು ?

**ಕಬ್ಬನ್‌ಪಾರ್ಕ್ ನಿರ್ವಹಣೆ ಖಾಸಗಿಯವರಿಗೆ ವಹಿಸುವ ಕುರಿತು**

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೨೬೯ (೧೩೪೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕಬ್ಬನ್‌ಪಾರ್ಕ್ ಉದ್ಯಾನವನ ನಿರ್ವಹಣೆಯ ಜವಾಬ್ದಾರಿಗಳನ್ನು ಸರ್ಕಾರದ ಬದಲಿಗೆ ; ಖಾಸಗಿ ಸದಸ್ಯರ ಸಮಿತಿಗೆ ಅಥವಾ ಬೇರೆ ಯಾವುದಾದರೂ ವ್ಯವಸ್ಥೆಗೆ ಒಳಪಡಿಸುವ ಪ್ರಸ್ತಾವ/ಉದ್ದೇಶಗಳು ಸರ್ಕಾರದ ಮುಂದವೆಯೇ ಇದ್ದಲ್ಲಿ ಕಾರಣಗಳೇನು ;

(ಆ) ಪ್ರಸ್ತುತ ಸರ್ಕಾರದ ನಿರ್ವಹಣೆಯ ವ್ಯವಸ್ಥೆಯನ್ನೇ ಮುಂದುವರಿಸಲು ಸರ್ಕಾರಕ್ಕೆ ಇರುವ ತೊಡಕುಗಳೇನು ;

(ಇ) ಕಬ್ಬನ್‌ಪಾರ್ಕ್ ಜಮೀನು ಒತ್ತುವರಿಯಾಗಿದೆಯೇ ; ಆಗಿದ್ದಲ್ಲಿ, ಒತ್ತುವರಿ ಆಗಿರುವ ವಿಸ್ತೀರ್ಣ ಎಷ್ಟು ?

## ಅನಧಿಕೃತ ಚೀಟಿ ಮತ್ತು ಲೇವಾದೇವಿದಾರರ ಅಕ್ರಮಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-**

೧೨೭೦ (೧೫೨೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಲೇವಾದೇವಿ ಅಧಿನಿಯಮ ೧೯೬೧ರಡಿಯಲ್ಲಿ, ರಾಜ್ಯದಲ್ಲಿ ಪರವಾನಗಿ ಪಡೆದ ಲೇವಾದೇವಿ (Moneylenders) ಗಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಖ್ಯೆಗಳ ವಿವರಗಳನ್ನು ನೀಡುವುದು) ;

(ಆ) ೧೯೮೨ರ ಚೀಟಿ ವಿಧಿ ಕಾಯಿದೆಯಡಿಯಲ್ಲಿ, ರಾಜ್ಯದಲ್ಲಿ ಪರವಾನಗಿ ಪಡೆದ ಚೀಟಿ ಸಂಸ್ಥೆ/ವ್ಯಕ್ತಿಗಳ ಸಂಖ್ಯೆ ಎಷ್ಟು ; ಅನಧಿಕೃತವಾಗಿ ಚೀಟಿ ನಡೆಸುತ್ತಿರುವ ಸಂಸ್ಥೆ/ವ್ಯಕ್ತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಪರವಾನಗಿ ಪಡೆಯದೆ ರಾಜ್ಯದಲ್ಲಿ ಖಾಸಗಿ ಲೇವಾದೇವಿಗಾರರು ಅಧಿಕ ಬಡ್ಡಿಯನ್ನು ವಿಧಿಸಿ ಸಾರ್ವಜನಿಕರಿಗೆ ಶೋಷಣೆ ಮಾಡುತ್ತಿರುವುದು ; ಪರವಾನಗಿ ಪಡೆಯದೆ, ರಾಜ್ಯದಲ್ಲಿ ಖಾಸಗಿಯಾಗಿ ಕೆಲ ಸಂಸ್ಥೆಗಳು/ವ್ಯಕ್ತಿಗಳು ಚೀಟಿ ವ್ಯವಹಾರ ಮಾಡುತ್ತಾ ; ಸಾರ್ವಜನಿಕರಿಗೆ ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅನಧಿಕೃತವಾಗಿ ಚೀಟಿ ಮಾಡುತ್ತಿರುವವರು ಮತ್ತು ಅನಧಿಕೃತ ಲೇವಾದೇವಿಗಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ಅಳವಡಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೭೧ (೧೫೭೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೨-೧೩, ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ರೈತರ ಹೊಲಗಳ ಪಂಪ್‌ಸೆಟ್‌ಗಳಿಗೆ ಸೋಲಾರ್ ಅಳವಡಿಸಲು ಮೀಸಲಿಟ್ಟ ಹಣವೆಷ್ಟು ;

(ಆ) ೨೦೧೨ ರಿಂದ ೨೦೧೫ರವರೆಗೆ ವರ್ಷವಾರು ರೈತರ ಸೋಲಾರ್ ಪಂಪ್‌ಸೆಟ್‌ಗಳಿಗೆ ಖರ್ಚಾದ ಹಣವೆಷ್ಟು ;

(ಇ) ಎಷ್ಟು ರೈತರು ಇದರ ಲಾಭ ಪಡೆದಿದ್ದಾರೆ ; (ತಾಲ್ಲೂಕುವಾರು, ವರ್ಷವಾರು, ಮಾಹಿತಿ ಒದಗಿಸುವುದು)

(ಈ) ಈವರೆವಿಗೂ ಈ ಯೋಜನೆಯು ಸಮರ್ಪಕವಾಗಿ ಜಾರಿಯಾಗದಿರಲು ಕಾರಣಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಮಹಾನಗರ ಪಾಲಿಕೆಗಳ ಮಾಹಿತಿ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೭೨ (೧೫೭೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿರುವ ಒಟ್ಟು ಮಹಾನಗರ ಪಾಲಿಕೆಗಳ ಸಂಖ್ಯೆಗಳೆಷ್ಟು ಮತ್ತು ಯಾವ ಯಾವ ನಗರಗಳಲ್ಲಿ ಇವೆ ; ಆಯಾ ನಗರಗಳ ಹೆಸರು ಮತ್ತು ವಾರ್ಡ್‌ಗಳ ಸಂಖ್ಯೆಗಳೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕರ್ನಾಟಕ ರಾಜ್ಯದಲ್ಲಿರುವ ನಗರ ಸಭೆಗಳೆಷ್ಟು ; ಅವು ಯಾವ ಯಾವ ನಗರಗಳು ; ಆಯಾ ನಗರಗಳಲ್ಲಿ ಬರುವ ವಾರ್ಡ್ ಸಂಖ್ಯೆಗಳೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿ ಬರುವ ಒಟ್ಟು ಪುರಸಭೆಗಳೆಷ್ಟು ; ಅವುಗಳ ಹೆಸರು ಮತ್ತು ಆಯಾ ಪುರಸಭೆಗಳಲ್ಲಿ ಇರುವ ವಾರ್ಡ್‌ಗಳ ಸಂಖ್ಯೆಗಳೆಷ್ಟು;

(ಈ) ರಾಜ್ಯದಲ್ಲಿ ಒಟ್ಟು ಪಟ್ಟಣ ಪಂಚಾಯತ್‌ಗಳೆಷ್ಟು ; ಆಯಾ ಪಟ್ಟಣ ಪಂಚಾಯತ್‌ಗಳಲ್ಲಿರುವ ವಾರ್ಡ್ ಸಂಖ್ಯೆಗಳೆಷ್ಟು ? (ಹೆಸರುಗಳೊಂದಿಗೆ ವಾರ್ಡ್ ಸಂಖ್ಯಾವಾರು ವಿವರ ಒದಗಿಸುವುದು)

## ಸಕ್ಕರೆ ಉತ್ಪಾದನೆಗೆ ಸಲ್ಫರ್ ಬಳಕೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೭೩ (೧೩೫೬) ಮಾನ್ಯ ಸಹಕಾರ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಕ್ಕರೆ ಉತ್ಪಾದಿಸುವಾಗ ಯಾವ ಯಾವ ಫ್ಯಾಕ್ಟರಿಯಲ್ಲಿ ಸಕ್ಕರೆಗೆ ಸಲ್ಫರ್ ಬೆರೆಸಲಾಗುತ್ತಿದೆ ; ಈ ಸಲ್ಫರ್ ಪ್ರಮಾಣ ಸಕ್ಕರೆಯಲ್ಲಿ ಇರುವುದರಿಂದ ಮನುಷ್ಯರ ಮೇಲೆ ಉಂಟಾಗುವ ದುಷ್ಪರಿಣಾಮಗಳು ಯಾವುವು ; (ವಿವರ ಒದಗಿಸುವುದು)

(ಆ) ಸಲ್ಫರ್ ಕಳೆದ ನೂರಾರು ವರ್ಷದಿಂದ ಸಕ್ಕರೆ ಬಳಕೆಯಾಗಿ ಜನರ ಮೇಲೆ ಅರಿಪಿಲ್ಲದೆ ಭೀಕರ ಪರಿಣಾಮಗಳನ್ನುಂಟು ಮಾಡುತ್ತಿರುವುದರಿಂದ ಇದನ್ನು ಕೂಡಲೇ ಕಟ್ಟುನಿಟ್ಟಾಗಿ ತಡೆಗಟ್ಟಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಹಾವೇರಿ ಜಿಲ್ಲಾ ಸಂಗೂರು ಸಕ್ಕರೆ ಕಾರ್ಖಾನೆಯು ರೈತರಿಗೆ ನಿಗದಿತ ಮೊತ್ತವನ್ನು ಪಾವತಿಸದೆ ಇರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೭೪ (೧೫೭೧) ಮಾನ್ಯ ಸಹಕಾರ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲಾ ಸಂಗೂರು ಸಕ್ಕರೆ ಕಾರ್ಖಾನೆಗೆ ಕಬ್ಬು ಕಳುಸಿದ ರೈತರಿಗೆ ಪ್ರತಿ ಟನ್ನಿಗೆ ರೂ. ೧,೮೦೦/–ಗಳನ್ನು ಪಾವತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸರ್ಕಾರವು ನಿಗದಿಪಡಿಸಿರುವ ದರ ಪ್ರತಿ ಟನ್ನಿಗೆ ರೂ. ೨,೫೦೦/-ಗಳನ್ನು ಪಾವತಿಸಿಬೇಕೆಂಬುದು ಕಾರ್ಖಾನೆ ಮಾಲೀಕರಿಗೆ ಗೊತ್ತಿಲ್ಲವೆ ;

(ಇ) ಅದರಂತೆ, ಈ ವ್ಯತ್ಯಾಸದ ಮೊತ್ತವನ್ನು ಎಷ್ಟು ಜನ ರೈತರಿಗೆ ಪಾವತಿಸಬೇಕಾಗಿರುತ್ತದೆ ; ವ್ಯತ್ಯಾಸದ ಒಟ್ಟು ಮೊತ್ತ ಎಷ್ಟು, ಸದರಿ ಹಣವನ್ನು ರೈತರಿಗೆ ಯಾವ ಕಾಲಮಿತಿಯೊಳಗೆ ಪಾವತಿಸಲು ಕ್ರಮ ವಹಿಸಲಾಗುವುದು ;

(ಈ) ಕಾರ್ಖಾನೆಯಲ್ಲಿ ರೈತರ ಪ್ರತಿ ಟನ್ ಕಬ್ಬಿಗೆ ೧೦೫ ಕೆ.ಜಿಯಿಂದ ೧೧೦ ಕೆ.ಜಿ.ಗಳ ಸಕ್ಕರೆ ಇಳುವರಿ ಬರುತ್ತದೆ ; ಆದರೆ ಈ ಸಕ್ಕರೆ ಕಾರ್ಖಾನೆಯಲ್ಲಿ ಪ್ರತಿ ಟನ್ ಕಬ್ಬಿಗೆ ೯೬ ಕೆ.ಜಿ. ಇಳುವರಿ ಅಂತ ಕಾರ್ಖಾನೆಯವರ ಮೇಲೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಉ) ಈ ರೀತಿ ರೈತರಿಗೆ ನಷ್ಟ ಉಂಟು ಮಾಡುತ್ತಿರುವ ಕಾರ್ಖಾನೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ?

## ಸಹಕಾರ ಬ್ಯಾಂಕುಗಳ ಕುರಿತು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೫ (೧೬೪೦) ಮಾನ್ಯ ಸಹಕಾರ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಸ್ಥಾಪನೆಗೊಂಡ ಸಹಕಾರ ಬ್ಯಾಂಕುಗಳ ಸಂಖ್ಯೆ ಎಷ್ಟು ; ಅದರಲ್ಲಿ ಕೆಲಸ ನಿರ್ವಹಿಸುತ್ತಿರುವ ಸಹಕಾರ ಬ್ಯಾಂಕುಗಳ ಸಂಖ್ಯೆ ಎಷ್ಟು ;

(ಆ) ಕಳೆದ ೧೦ ವರ್ಷಗಳಲ್ಲಿ ದಿವಾಳಿಯಾದ ಬ್ಯಾಂಕುಗಳ ಕುರಿತು ಯಾವುದಾದರೂ ವಿಚಾರಣೆ ಆಗಿದೆಯೇ ? (ಹಾಗಿದ್ದಲ್ಲಿ, ಅದರ ಪ್ರತಿಯನ್ನು ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಯಶಸ್ವಿನಿ ರೋಗಿಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೬ (೧೩೬೮) ಮಾನ್ಯ ಸಹಕಾರ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಯಶಸ್ವಿನಿ ಯೋಜನೆಯಡಿ ಎಷ್ಟು ಆಸ್ಪತ್ರೆಗಳನ್ನು ನೋಂದಾಯಿಸಲಾಗಿದೆ ; (ಆಸ್ಪತ್ರೆಗಳ ಪಟ್ಟಿಯನ್ನು ಒದಗಿಸುವುದು)

(ಆ) ಈ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಯಶಸ್ವಿನಿ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಶಸ್ತ್ರಚಿಕಿತ್ಸೆ ನಡೆಸಲಾಗಿದೆ ? (ವರ್ಷಾವಾರು ಆಸ್ಪತ್ರೆವಾರು ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ತೋಟಗಾರಿಕೆ ಯೋಜನೆಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೭ (೧೬೩೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಲಾದ ಯೋಜನೆಗಳಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಿಗೆ ಬಿಡುಗಡೆ ಮಾಡಲಾದ ಹಣವೆಷ್ಟು ;

(ಇ) ಖರ್ಚಾದ ಹಣವೆಷ್ಟು ; ಉಳಿಕೆ ಹಣವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕೃಷಿ ಇಲಾಖೆಯಿಂದ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೮ (೧३೭೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ವಿವಿಧ ಕಾರ್ಯಕ್ರಮಗಳು ಯಾವುವು ; (ವಿವರ ನೀಡುವುದು)

(ಆ) ಇಲಾಖೆಯ ಕಾರ್ಯಕ್ರಮಗಳಿಗೆ ನಿಗಧಿಪಡಿಸಿದ, ಸರ್ಕಾರದಿಂದ ಬಿಡುಗಡೆಯಾದ ಮತ್ತು ಖರ್ಚಾದ ಅನುದಾನದ ಮೊತ್ತ ಎಷ್ಟು; (ಯೋಜನೆವಾರು, ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಬರಗಾಲ ಪೀಡಿತ ಪ್ರದೇಶಗಳಲ್ಲಿ ಮಣ್ಣಿನ ಸಂರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಪಾರಂಪಳ್ಳಿ-ಪಡುಕೆರೆಗೆ ಮಧ್ಯೆ ಹೊಳೆಗೆ ಸೇತುವೆ ನಿರ್ಮಾಣದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೯ (೧೩೮೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ತಾಲ್ಲೂಕಿನ ಸಾಲಿಗ್ರಾಮ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸಾಲಿಗ್ರಾಮದಿಂದ ಪಾರಂಪಳ್ಳಿ ಪಡುಕೆರೆಗೆ ಸೇರುವ ಹೊಳೆಯ ಮಧ್ಯದಲ್ಲಿ ಸೇತುವೆ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆಯ ಮೂಲಕ ಕಾಮಗಾರಿ ಕೈಗೆತ್ತಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರ ಮಂಜೂರು ಮಾಡಿದ ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು ;

(ಆ) ಸದರಿ ಕಾಮಗಾರಿಯನ್ನು ಈ ಮೊದಲು ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಸೂಚನೆಯ ಮೇರೆಗೆ ಲೋಕೋಪಯೋಗಿ ಇಲಾಖೆ ಕೈಗೆತ್ತಿಕೊಂಡಿರುವುದು ನಿಜವೇ ;

(ಇ) ಸದರಿ ಕಾಮಗಾರಿ ವಿಳಂಬಕ್ಕೆ ಕಾರಣವೇನು ; ಯಾವಾಗ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ? (ವಿವರ ನೀಡುವುದು)

## ವಾಣಿಜ್ಯ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಲು ಪಂಚಾಯಿತಿಗಳಿಂದ ನಿರಾಕ್ಷೇಪಣಾ ಪತ್ರ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೦ (೧೩೬೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎಸ್ಕಾಂಗಳು ವಾಸ್ತವ್ಯ ಮತ್ತು ವಾಣಿಜ್ಯ ಕಟ್ಟಡಗಳಿಗೆ ವಿದ್ಯುತ್ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡುವ ಮುಂಚೆ ಸ್ಥಳೀಯ ಗ್ರಾಮ ಪಂಚಾಯತ್‌ಗಳಿಂದ ನಿರಾಕ್ಷೇಪಣ ಪತ್ರ ಪಡೆಯುವುದು ಕಡ್ಡಾಯವೇ ;

(ಆ) ಹೌದಾದಲ್ಲಿ ಯಾವ ಕಾಯಿದೆ/ನಿಯಮದ ಯಾವ ಪ್ರಕರಣದಂತೆ ಕಡ್ಡಾಯಗೊಳಿಸಲಾಗಿದೆ ; (ಕಾಯಿದೆ/ನಿಯಮದ ಪ್ರಕರಣದ ಸಂಖ್ಯೆ ನೀಡುವುದು ಮತ್ತು ಸರ್ಕಾರದ ಸುತ್ತೋಲೆ ಆದೇಶಗಳಿದ್ದಲ್ಲಿ ಪ್ರತಿ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ವಾಸ್ತವ್ಯ ಮತ್ತು ವಾಣಿಜ್ಯ ಕಟ್ಟಡಗಳಿಗೆ ಸ್ಥಳೀಯ ಗ್ರಾಮ ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆಗಳಿಂದ ನಿರಾಕ್ಷೇಪಣ ಪತ್ರ ಇಲ್ಲದೆ ವಿದ್ಯುತ್ ಸಂಪರ್ಕ ನೀಡಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ ೨೭೦೮-೨೦೧೧ರ ಕ್ರಮ ಸಂಖ್ಯೆ ೬ ರಲ್ಲಿ "ವಿದ್ಯುತ್" ಗಾಳಿ ಮತ್ತು ನೀರಿನಂತೆ ಮೂಲಭೂತ ಅವಶ್ಯಕತೆ ಎಂದು ವ್ಯಾಖ್ಯಾನಿಸಿದ್ದು ಸರ್ಕಾರ ಅದರಂತೆ ಯಾವ ಕ್ರಮ ಕೈಗೊಳ್ಳಲಿದೆ ?

## ವಿದ್ಯುತ್ ಉತ್ಪಾದನಾ ಘಟಕಗಳ ವಾರ್ಷಿಕ ಬೇಡಿಕೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೧ (೧೩೭೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ವಿದ್ಯುತ್ ಉತ್ಪಾದನಾ ಘಟಕಗಳೆಷ್ಟು ; ಅವು ಯಾವುವು ; (ಸರ್ಕಾರಿ ಮತ್ತು ಖಾಸಗಿ ಘಟಕಗಳ ವಿವರ ಒದಗಿಸುವುದು)

(ಆ) ರಾಜ್ಯದ ದೈನಂದಿನ ಮತ್ತು ವಾರ್ಷಿಕ ವಿದ್ಯುತ್ ಬೇಡಿಕೆ ಎಷ್ಟು ; ರಾಜ್ಯದಲ್ಲಿ ವಿದ್ಯುತ್ ಉತ್ಪಾದನಾ ಘಟಕಗಳಿಂದ ಉತ್ಪಾದನೆಯಾಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು ;

(ಇ) ಸದರಿ ವಿದ್ಯುತ್ ಉತ್ಪಾದನ ಘಟಕಗಳು ರಾಜ್ಯದ ವಿದ್ಯುತ್ ಬೇಡಿಕೆಯನ್ನು ಪೂರ್ಣ ಪ್ರಮಾಣದಲ್ಲಿ ಒದಗಿಸಲು ಸಮರ್ಥವಾಗಿದೆಯೇ ; ಇಲ್ಲವಾದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಛತ್ತಿಸ್‌ಘಡ ಸರ್ಕಾರದೊಂದಿಗೆ ವಿದ್ಯುತ್ ಖರೀದಿ ಸಂಬಂಧ ಒಪ್ಪಂದ ಮಾಡಿಕೊಂಡಿರುವುದು ನಿಜವೇ ; ಹೌದಾದಲ್ಲಿ ಯಾವ ಹಂತದಲ್ಲಿದೆ ; ಒಪ್ಪಂದ ಪ್ರಮುಖ ಅಂಶಗಳು ಯಾವುವು ?

## ಗ್ರಾಮ ಪಂಚಾಯಿತಿಗಳ ವಿದ್ಯುತ್ ಬಿಲ್ಲಿಗೆ ಬಡ್ಡಿ ತೆಗೆದು ಹಾಕುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೨ (೧೩೭೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎಸ್ಕಾಂ ಕಂಪನಿಗಳಿಗೆ ಪ್ರಸಕ್ತ ಗ್ರಾಮ ಪಂಚಾಯಿತಿಗಳಿಂದ ಬಾಕಿ ಇರುವ ಬಿಲ್ಲಿನ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಅದರಲ್ಲಿ ವಿದ್ಯುತ್ ಬಳಕೆಯ ಮತ್ತು ಬಡ್ಡಿ ಮೊತ್ತವೆಷ್ಟು ;

(ಆ) ಗ್ರಾಮ ಪಂಚಾಯತಿಗಳು ಬಾಕಿ ಇರಿಸಿಕೊಂಡಿರುವ ವಿದ್ಯುತ್ ಬಿಲ್ಲಿಗೆ ಎಷ್ಟು ಬಡ್ಡಿ ವಿಧಿಸಲಾಗುತ್ತಿದೆ ;

(ಇ) ಸರ್ಕಾರವು ಗ್ರಾಮ ಪಂಚಾಯಿತಿಗಳ ಕುಡಿಯುವ ನೀರಿನ ಸ್ಥಾವರದ ಬಾಕಿ ಇರುವ ವಿದ್ಯುತ್ ಬಿಲ್ಲುಗಳಿಗೆ ಬಡ್ಡಿ ವಿಧಿಸುತ್ತಿರುವುದು ಸರಿಯೇ ;

(ಈ) ಗ್ರಾಮ ಪಂಚಾಯತಿಗಳ ಬಾಕಿ ಇರುವ ವಿದ್ಯುತ್ ಬಿಲ್ಲಿನ ಬಡ್ಡಿ ತೆಗೆದು ಹಾಕುವ ಬಗ್ಗೆ ಸರ್ಕಾರ ಯಾವ ಕ್ರಮ ತೆಗೆದುಕೊಳ್ಳುವುದು ; ಈ ಬಗ್ಗೆ ಆದೇಶ ಹೊರಡಿಸಲಾಗುವುದು ಯಾವಾಗ ? (ವಿವರ ನೀಡುವುದು)

## ಬಳ್ಳಾರಿ ಜಿಲ್ಲೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿಯಲ್ಲಿ ಒದಗಿಸಲಾಗಿರುವ ಅನುದಾನ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :--**

೧೨೮೩ (೧೫೩೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿಯಲ್ಲಿ ಬಳ್ಳಾರಿ ಜಿಲ್ಲೆಗೆ ಒದಗಿಸಲಾಗಿರುವ ಅನುದಾನ ಎಷ್ಟು ; (ಕಳೆದ ೨ ವರ್ಷಗಳ ವಿವರ ನೀಡುವುದು)

(ಆ) ಈ ಯೋಜನೆಯ ಅಡಿಯಲ್ಲಿ ಒದಗಿಸಲಾದ ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಉಪಯೋಗಿಸುತ್ತದೆ ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಬಳ್ಳಾರಿ ಜಿಲ್ಲೆಗೆ ಒದಗಿಸಲಾದ ಮೊತ್ತದಲ್ಲಿ ಯಾವ ಯಾವ ಕಾರ್ಯಕ್ರಮ/ಕಾಮಗಾರಿಗಳಿಗಾಗಿ ವೆಚ್ಚ ಮಾಡಲಾಗಿದೆ ; (ತಾಲ್ಲೂಕುವಾರು, ಕಾಮಗಾರಿವಾರು ಮತ್ತು ವರ್ಷವಾರು ವಿವರ ನೀಡುವುದು)

(ಈ) ರಾಜ್ಯದ ಇತರೆ ಜಿಲ್ಲೆಗಳಿಗೆ ಕಳೆದ ೨ ವರ್ಷಗಳಲ್ಲಿ ಒದಗಿಸಲಾದ ಅನುದಾನದ ವಿವರ ನೀಡುವುದು ?

## ಬಳ್ಳಾರಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ "ಹೈ ವೋಲ್ಟೇಜ್ ವಿತರಣಾ ವ್ಯವಸ್ಥೆ" ಯೋಜನೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೪ (೧೫೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯ ಎಷ್ಟು ತಾಲ್ಲೂಕುಗಳಿಗೆ "ಹೈ ವೋಲ್ಟೇಜ್ ವಿತರಣಾ ವ್ಯವಸ್ಥೆ" ಯೋಜನೆ ಇದೆ ;

(ಆ) ಬಳ್ಳಾರಿ ಜಿಲ್ಲೆಯ ಗ್ರಾಮೀಣ ಪ್ರದೇಶದ ರೈತರಿಗೆ ಸರಿಯಾದ ವೋಲ್ಟೇಜ್ ವಿದ್ಯುತ್ ಸರಬರಾಜು ಸಿಗದೆ, ಬೆಳೆ ಹಾನಿಯಾಗುತ್ತಿರುವುದರಿಂದ ಈ ಯೋಜನೆಯನ್ನು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಕೂಡಲೇ ಜಾರಿ ಮಾಡಿ ರೈತರಿಗೆ ಸರ್ಕಾರ ಅನುಕೂಲ ಮಾಡಿಕೊಡುವುದೇ ?

## ಖುಷ್ಕಿ ಜಮೀನುಗಳಿಗೆ ರೂಪಿಸಲಾದ ಯೋಜನೆಗಳು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೫ (೧೫೩೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯ ಖುಷ್ಕಿ ಜಮೀನುಗಳ ಅಭಿವೃದ್ಧಿಗೆ ತೋಟಗಾರಿಕೆ ಇಲಾಖೆಯಿಂದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; (ಯೋಜನೆವಾರು ವಿವರ ನೀಡುವುದು)

(ಆ) ಪ್ರಸಕ್ತ ವರ್ಷದಲ್ಲಿ ಎಷ್ಟು ಪ್ರದೇಶದಲ್ಲಿ ಈ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಪೌರ ಕಾರ್ಮಿಕರಿಗೆ ವಸತಿ ಹಾಗೂ ಮೂಲ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೬ (೧೫೪೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕಿನ ಪುರಾತನ ಪ್ರವಾಸ ತಾಣವಾಗಿರುವ ರಾಮನಾಥಪುರ ಗ್ರಾಮದಲ್ಲಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ; ಇವರಿಗೆ ಮೂಲಭೂತ ಸೌಲಭ್ಯ ಮತ್ತು ಪಡಿತರ ಚೀಟಿಗಳನ್ನು ಒದಗಿಸಲಾಗಿದೆಯೆ ;

(ಆ) ಈ ಪೌರ ಕಾರ್ಮಿಕರು ವಾಸಿಸುತ್ತಿರುವ ಮನೆಗಳು ಸಂಪೂರ್ಣ ಶಿಥಿಲಗೊಂಡು ಶೀತ ಪೀಡಿತವಾಗಿದ್ದು ಮೂಲಭೂತ ಸೌಲಭ್ಯಗಳ ಕೊರತೆ ಹಾಗೂ ಅಶುಚಿತ್ವದಿಂದ ಕೂಡಿರುವ ವಠಾರದಿಂದಾಗಿ ಬಹುತೇಕ ಜನರು ಅನಾರೋಗ್ಯಕ್ಕೆ ತುತ್ತಾಗಿ ವಿಚಿತ್ರ ಕಾಯಿಲೆಗಳಿಂದ ಬಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಪರಿಹಾರೋಪಾಯದ ಕ್ರಮಗಳೇನು ;

(ಇ) ಈ ಪೌರ ಕಾರ್ಮಿಕರಿಗೆ ವಾಸಿಸುವ ಮನೆಗಳಿಗೆ ಹಕ್ಕುಪತ್ರಗಳನ್ನು ನೀಡಲು ಮತ್ತು ಉದ್ಯೋಗ ಅರಸಿ ಗುಳೆ ಹೋಗುವುದನ್ನು ತಪ್ಪಿಸಲು ಉದ್ಯೋಗ ಖಾತ್ರಿ ಯೋಜನೆಯಡಿ ಉದ್ಯೋಗ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರೈತರಿಗೆ ಕಳಪೆ ಗೊಬ್ಬರ ವಿತರಣೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೭ (೧೫೪೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ರೈತರಿಗೆ ಖಾಸಗಿ ಅಂಗಡಿಗಳಿಂದ ಕಳಪೆ ಗೊಬ್ಬರ ವಿತರಣೆ ಮಾಡಿರುವ ಸಂಬಂಧ ದಾಖಲಾಗಿರುವ ದೂರುಗಳ ಸಂಖ್ಯೆ ಎಷ್ಟು ;

(ಆ) ಕೆಲವು ಅಂಗಡಿಗಳಿಂದ ಡಿ.ಎ.ಪಿ ರಸಗೊಬ್ಬರದಲ್ಲಿ ಗೊಬ್ಬರಕ್ಕಿಂತ ಹೆಚ್ಚಿಗೆ ಮರಳೇ ಇರುವುದರಿಂದ ರೈತರು ಆರೋಪಿಸುತ್ತಿದ್ದು, ಇಂತಹ ದೂರುಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರೈತರ ಹಿತದೃಷ್ಟಿಯಿಂದ ಕಳಪೆ ಗೊಬ್ಬರ ವಿತರಣೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು, ಗೊಬ್ಬರದ ಅಂಗಡಿಗಳಿಂದ ನಿಯಮಿತವಾಗಿ ಸ್ಯಾಂಪಲ್‌ಗಳನ್ನು ಪ್ರಯೋಗಾಲಯದಲ್ಲಿ ತಪಾಸಣೆ ನಡೆಸಲಾಗುತ್ತಿದೆಯೇ ?

## ಕೆರೆಗಳಿಗೆ ತಡೆಗೋಡೆ ನಿರ್ಮಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೮ (೧೫೪೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿ ಕೆರೆ ಏರಿ ಮೇಲೆ ರಸ್ತೆ ಹೊಂದಿರುವ ಕೆರೆಗಳ ಸಂಖ್ಯೆ ಎಷ್ಟು ; ಇವುಗಳ ಪೈಕಿ ರಸ್ತೆಗೆ ತಡೆಗೋಡೆ ಹೊಂದಿರುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಅಧಿಕ ವಾಹನ ಸಂಚರಿಸುವ ಕೆರೆ ಏರಿಯ ಮೇಲಿನ ರಸ್ತೆಗಳಿಗೆ ತಡೆಗೋಡೆ ನಿರ್ಮಿಸಲು ಮತ್ತು ಡಾಂಬರೀಕರಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಾಲಬಾಧೆಯಿಂದ ರೈತರ ಆತ್ಮಹತ್ಯೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೮೯ (೧೫೩೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಾಲ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಉಚ್ಚಂಗಿ ಗ್ರಾಮದಲ್ಲಿ ಬಡ ರೈತರು ಯಾವುದೇ ಆದಾಯ ಮೂಲವಿಲ್ಲದಿರುವುದರಿಂದ

ಬ್ಯಾಂಕ್ ಸಾಲ ಹಾಗೂ ಕೈಸಾಲವಾಗಿ ಪಡೆದ ಹಣ ತೀರಿಸಲಾಗದೆ ಆದಾಯವಿಲ್ಲದೇ ಸಾಲ ತೀರಿಸಲಾಗದೇ ಆತ್ಮಹತ್ಯೆ ಮಾಡಿಕೊಳ್ಳಲಾಗುತ್ತಿದ್ದು, ಈ ರೀತಿಯ ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಳ್ಳುವ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಸರ್ಕಾರದಿಂದ ನೀಡುವ ಪರಿಹಾರವೇನು; ಇಂತಹ ಬ್ಯಾಂಕ್ ಸಾಲ ಮನ್ನಾ ಮಾಡಲು ಯಾವ ಕ್ರಮ ಕೈಗೊಂಡಿದೆ ಮತ್ತು ಅನಧಿಕೃತ ಬಡ್ಡಿ ವ್ಯವಹಾರ ಮಾಡುವವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ಹೊಳೆನರಸೀಪುರದಿಂದ ಹಳ್ಳಿಮೈಸೂರು ಮಾರ್ಗವಾಗಿ ಸಾಲಿಗ್ರಾಮ ರಸ್ತೆಗೆ ಡಾಂಬರೀಕರಣ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೯೦ (೧೫೪೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯ ಹೊಳೆನರಸೀಪುರದಿಂದ ಲಕ್ಕೂರು, ತಾತನಹಳ್ಳಿ ಮತ್ತು ಹಳ್ಳಿಮೈಸೂರು ಮಾರ್ಗವಾಗಿ ಸಾಲಿಗ್ರಾಮದವರೆಗೆ ಸಂಪರ್ಕ ಕಲ್ಪಿಸಲು ನಿರ್ಮಿಸಲಾಗಿರುವ ರಸ್ತೆಗೆ ಈವರೆವಿಗೂ ಡಾಂಬರೀಕರಣ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಮೈಸೂರಿನ ಎಫ್.ಟಿ.ಎಸ್. ಕಟ್ಟಡದ ದುರಸ್ತಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯೧ (೧೫೪೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದಲ್ಲಿರುವ ಫಾರ್ಬೆಸ್ ಟ್ರಾನ್ಸ್ ಫಾರ್ಮರ್ ಸ್ಟೇಷನ್ (ಎಫ್.ಟಿ.ಎಸ್) ಕಟ್ಟಡವನ್ನು ಯಾವಾಗ ನಿರ್ಮಿಸಲಾಯಿತು; ಈ ಕಟ್ಟಡ ಬಿರುಕು ಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದನ್ನು ಪಾರಂಪರಿಕ ಕಟ್ಟಡವೆಂದು ಪರಿಗಣಿಸಿ ರಿಪೇರಿ ಕಾರ್ಯವನ್ನು ಕೈಗೊಳ್ಳಲಾಗುವುದೇ ?

## ರಸ್ತೆಗಳಲ್ಲಿ ರೋಡ್ ಡಿವೈಡರ್ ನಿರ್ಮಿಸಿರುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೨೯೨ (೧೫೪೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) P.W.D. ರಸ್ತೆಗಳಲ್ಲಿ ಸ್ಥಳೀಯ ಸಂಸ್ಥೆಗಳಿಂದ ರೋಡ್ ಡಿವೈಡರ್ ಹಾಗೂ ರಸ್ತೆ ಮಧ್ಯದಲ್ಲಿ ವಿದ್ಯುತ್ ಕಂಬಗಳನ್ನು ನೆಡಲು ಇರುವ (ರಸ್ತೆ ಗಾತ್ರ, ಗುಣಮಟ್ಟ, ತಾಂತ್ರಿಕ ಅವಶ್ಯಕತೆಗಳ ಬಗ್ಗೆ) ನಿಯಮಾವಳಿಗಳೇನು ;

(ಆ) ವಿಜಯಾಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಯಾವ ಯಾವ ಸ್ಥಳೀಯ ಸಂಸ್ಥೆಗಳ ನಿಯಮ ಪಾಲನೆ ಮಾಡಿದೆ; ಹಾಗೂ ಉಲ್ಲಂಘನೆ ಮಾಡಿರುವ ಸ್ಥಳೀಯ ಸಂಸ್ಥೆಗಳು ಯಾವುವು ? (ಸಂಪೂರ್ಣ ವಿವರ ನೀಡುವುದು)

## ಹೆಸ್ಕಾಂ ಕಛೇರಿಗಳಲ್ಲಿನ ಸಿಬ್ಬಂದಿಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೨೯೩ (೧೫೪೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಸ್ಕಾಂ ವ್ಯಾಪ್ತಿಯಲ್ಲಿರುವ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ಹೊಸದಾಗಿ ಸೃಜಿಸಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಇ) ಹೆಸ್ಕಾಂ ಕಛೇರಿಗಳ ನಿರ್ವಹಣೆಯಲ್ಲಿ ಖಾಯಂ ತಾಂತ್ರಿಕ ಸಿಬ್ಬಂದಿಗಳ ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಾಗಲಕೋಟೆಯಲ್ಲಿರುವ ತೋಟಗಾರಿಕಾ ವಿಜ್ಞಾನ ವಿಶ್ವವಿದ್ಯಾಲಯಕ್ಕೆ ಒದಗಿಸಿದ ಅನುದಾನ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೨೯೪ (೧೫೫೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೨ ವರ್ಷಗಳಲ್ಲಿ ಬಾಗಲಕೋಟೆ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಒದಗಿಸಿರುವ ಅನುದಾನವೆಷ್ಟು ಹಾಗೂ ವಿಶೇಷ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ವಿಶ್ವವಿದ್ಯಾಲಯದಲ್ಲಿ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ ಅವು ಯಾವುವು ;

(ಇ) ಈ ವಿಶ್ವವಿದ್ಯಾಲಯದ ವತಿಯಿಂದ ರೈತರಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು ? (ವಿವರ ನೀಡುವುದು)

## ಡಿ.ಸಿ.ಸಿ ಬ್ಯಾಂಕ್‌ಗಳ ಮೂಲಕ ಶೈಕ್ಷಣಿಕ ಸಾಲ ಕೊಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೨೯೫ (೧೫೪೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಾಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಡಿ.ಸಿ.ಸಿ ಬ್ಯಾಂಕ್ ಹಾಗೂ ಸೊಸೈಟಿಗಳ ಮೂಲಕ ಶೈಕ್ಷಣಿಕ ಸಾಲ ನೀಡುವ ಯೋಜನೆ ಜಾರಿಯಲ್ಲಿ ಇದೆಯೇ ;

(ಆ) ಇದ್ದಲ್ಲಿ, ಯಾವ ಯಾವ ಸಂಸ್ಥೆಗಳ ಮೂಲಕ ಯಾರು ಯಾರಿಗೆ ಎಷ್ಟು ಮೊತ್ತದ ಹಣವನ್ನು ಯಾವ ಉದ್ದೇಶಕ್ಕಾಗಿ ಮಂಜೂರು ಮಾಡಲಾಗಿದೆ ; (ವಿವರ ನೀಡುವುದು)

(ಇ) ಇಲ್ಲದಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಪ್ರಸಕ್ತ ಸಾಲಿನಲ್ಲಿ ಬೆಂಬಲ ಬೆಲೆ ಘೋಷಿತ ಬೆಳೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೯೬ (೧೫೫೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ಘೋಷಣೆ ಮಾಡಿದೆ; ಎಷ್ಟು ಮತ್ತು ಯಾವಾಗ ; (ಬೆಳೆವಾರು, ಬೆಂಬಲ ಬೆಲೆವಾರು ಹಾಗೂ ಘೋಷಿತ ತಿಂಗಳವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಬೆಂಬಲ ಬೆಲೆ ಘೋಷಿತ ಬೆಳೆಗಳನ್ನು ಖರೀದಿಸಲು ಇರುವ ಖರೀದಿ ಕೇಂದ್ರಗಳು ಯಾವುವು ;

(ಇ) ರಾಜ್ಯದಲ್ಲಿ ಬೆಂಬಲ ಬೆಲೆಯ ಮೂಲಕ ಖರೀದಿಸಲಾದ ಬೆಳೆಗಳನ್ನು ಶೇಖರಿಸಿಡಲು ಗೋದಾಮುಗಳನ್ನು ಹೊಂದಲಾಗಿದೆಯೇ ; (ಹೊಂದಿದ್ದಲ್ಲಿ ತಾಲ್ಲೂಕುವಾರು ಸ್ಥಳವಾರು ವಿವರ ನೀಡುವುದು)

(ಈ) ಬೆಂಬಲ ಬೆಲೆಯ ಮೂಲಕ ಖರೀದಿಸಲಾದ ಒಟ್ಟು ಬೆಳೆಗಳ ಪ್ರಮಾಣವೆಷ್ಟು ;

(ಉ) ಬೆಂಬಲ ಬೆಲೆಗಳನ್ನು ಘೋಷಣೆ ಮಾಡಿದಲ್ಲಿ ಗೋದಾಮುಗಳ ಕೊರತೆ ಹಾಗೂ ಪ್ರಚಾರದ ಕೊರತೆಯಿಂದಾಗಿ ಬೆಳೆಯ ಖರೀದಿ ಹಾಗೂ ಶೇಖರಣೆ ಮಾಡಲು ಸಾಧ್ಯವಾಗುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಜ್ಯದಲ್ಲಿ ಮೇಲ್ದರ್ಜೆಗೇರಿಸಲ್ಪಟ್ಟ ಲೋಕೋಪಯೋಗಿ ರಸ್ತೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೯೭ (೧೫೫೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮೇಲ್ದರ್ಜೆಗೇರಿಸಲ್ಪಟ್ಟ ಲೋಕೋಪಯೋಗಿ ರಸ್ತೆಗಳಾವುವು ;

(ಆ) ಕೆಳ ಹಂತದ ರಸ್ತೆಗಳನ್ನು ಲೋಕೋಪಯೋಗಿ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು ಮತ್ತು ಮುಂದಿನ ದಿನಗಳಲ್ಲಿ ಹಂತ. ಹಂತವಾಗಿ ಯಾವ, ಯಾವ ಕೆಳಹಂತದ ರಸ್ತೆಗಳನ್ನು ಲೋಕೋಪಯೋಗಿ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಯೋಜನೆ ಸರ್ಕಾರದ ಮುಂದಿದೆ ; (ತಾಲ್ಲೂಕುವಾರು ರಸ್ತೆವಾರು ವಿವರ ನೀಡುವುದು)

(ಇ) ಈ ರೀತಿ ಮೇಲ್ದರ್ಜೆಗೇರಿಸಲ್ಪಟ್ಟ ರಸ್ತೆಗಳ ಸುಧಾರಣೆಗೆ ಯಾವ, ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ರೈತರಿಗೆ ಮಾಹಿತಿ, ತರಬೇತಿ ಹಾಗೂ ಕಾರ್ಯಾಗಾರ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೯೮ (೧೫೫೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೃಷಿ ಇಲಾಖೆಯ ರೈತರಿಗೆ ನೀಡುತ್ತಿರುವ ಮಾಹಿತಿ, ತರಬೇತಿ ಮತ್ತು ಕಾರ್ಯಗಳಿಗೆ ನಿರ್ದಿಷ್ಟ ಕಾರ್ಯಕ್ಷೇತ್ರ ಇಲ್ಲದೆ ಇರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಜಿಲ್ಲೆ, ತಾಲ್ಲೂಕು, ಹೋಬಳಿ ಮತ್ತು ಗ್ರಾಮ ಪಂಚಾಯಿತಿಗಳ ಮಟ್ಟದಲ್ಲಿ ರೈತರ ಮಾಹಿತಿಗಾಗಿ ತರಬೇತಿ ಮತ್ತು ಕಾರ್ಯಾಗಾರಗಳನ್ನು ನಡೆಸಲು ನಿರ್ದಿಷ್ಟ ಮಾರ್ಗಸೂಚಿ, ಕಾಲಾವಧಿಯುನ್ನು ನಿಗದಿಪಡಿಸಲಾಗಿದೆಯೇ ; (ವಿವರ ನೀಡುವುದು)

(ಇ) ಇಂತಹ ಅನಿಶ್ಚಿತತೆಯಿಂದ ರೈತರಿಗೆ ಸಿಗಬೇಕಾದ ಸವಲತ್ತುಗಳು, ಕಾರ್ಯಕ್ರಮಗಳು, ಸಬ್ಸಿಡಿ ಮತ್ತು ಪ್ರವಾಸಗಳ ಪೂರ್ಣ ಪ್ರಮಾಣದ ಪ್ರಯೋಜನ ರೈತರಿಗೆ ದೊರಕುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಶಿಥಿಲಗೊಂಡಿರುವ ಆನಗಳ್ಳಿ ಗ್ರಾಮದ ಸೇತುವೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯ (೧೫೫೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರ ತಾಲ್ಲೂಕಿನ ಆನಗಳ್ಳಿ ಗ್ರಾಮದಲ್ಲಿ ಸೇತುವೆಯನ್ನು ಯಾವಾಗ ನಿರ್ಮಿಸಲಾಯಿತು;

(ಆ) ಕುಂದಾಪುರ ಪುರಸಭೆಯಿಂದ ಆನಗಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯು ಲೋಕೋಪಯೋಗಿ ಇಲಾಖೆ ರಸ್ತೆಯಾಗಿದ್ದು, ಸೇತುವೆಯು ಶಿಥಿಲಗೊಂಡಿರುವುದರಿಂದ ವಾಹನ ಸಂಚಾರವು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಈ ಸೇತುವೆಯ ನಿರ್ಮಾಣಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು; ಈ ಸೇತುವೆಯನ್ನು ಯಾವಾಗ ನಿರ್ಮಿಸಲಾಗುವುದು ?

F-4-B/B

## ವಾಣಿಜ್ಯ ಉದ್ದಿಮೆ ಬಳಕೆಯಡಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೦೦ (೧೫೫೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿ ವಾಣಿಜ್ಯ ಬಳಕೆಯಡಿಯಲ್ಲಿ (LT3) ವಿದ್ಯುತ್ ಸಂಪರ್ಕ ಪಡೆದು ಕಾರ್ಯನಿರ್ವಹಿಸುತ್ತಿರುವ ಜಲ್ಲಿಕ್ರಷರ್‌ಗಳ ಸಂಖ್ಯೆ ಎಷ್ಟು; ಅವು ಯಾವುವು ; (ತಾಲ್ಲೂಕುವಾರು, ಸಂಸ್ಥೆವಾರು, ವಿಳಾಸದೊಂದಿಗೆ, ಸಂಪರ್ಕ ಕಲ್ಪಿಸಿದ ವರ್ಷದೊಂದಿಗೆ ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಉದ್ದಿಮೆ ಬಳಕೆಯಡಿಯಲ್ಲಿ (LT5) ವಿದ್ಯುತ್ ಸಂಪರ್ಕ ಪಡೆದು ಕಾರ್ಯನಿರ್ವಹಿಸುತ್ತಿರುವ ಜಲ್ಲಿಕ್ರಷರ್‌ಗಳ ಸಂಖ್ಯೆ ಎಷ್ಟು; ಅವು ಯಾವುವು ; (ತಾಲ್ಲೂಕುವಾರು, ಸಂಸ್ಥೆವಾರು, ವಿಳಾಸದೊಂದಿಗೆ, ಸಂಪರ್ಕ ಕಲ್ಪಿಸಿದ ವರ್ಷದೊಂದಿಗೆ ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ವಾಣಿಜ್ಯ ಬಳಕೆಯಡಿಯಲ್ಲಿ (LT3) ವಿದ್ಯುತ್ ಸಂಪರ್ಕ ಪಡೆದು ಕಾರ್ಯನಿರ್ವಹಿಸುತ್ತಿರುವ ಗೇರುಬೀಜ ಸಂಸ್ಕರಣಾ ಘಟಕಗಳ ಸಂಖ್ಯೆ ಎಷ್ಟು; ಅವು ಯಾವುವು ; (ತಾಲ್ಲೂಕುವಾರು, ಸಂಸ್ಥೆವಾರು, ವಿಳಾಸದೊಂದಿಗೆ, ಸಂಪರ್ಕ ಕಲ್ಪಿಸಿದ ವರ್ಷದೊಂದಿಗೆ ವಿವರ ನೀಡುವುದು)

(ಈ) ಉಡುಪಿ ಜಿಲ್ಲೆಯಲ್ಲಿ ಉದ್ದಿಮೆ ಬಳಕೆಯಡಿಯಲ್ಲಿ (ಐಖಿಶಿ) ವಿದ್ಯುತ್ ಸಂಪರ್ಕ ಪಡೆದು ಕಾರ್ಯನಿರ್ವಹಿಸುತ್ತಿರುವ ಗೇರು ಸಂಸ್ಕರಣಾ ಘಟಕಗಳ ಸಂಖ್ಯೆ ಎಷ್ಟು; ಅವು ಯಾವುವು ? (ತಾಲ್ಲೂಕುವಾರು, ಸಂಸ್ಥೆವಾರು, ವಿಳಾಸದೊಂದಿಗೆ, ಸಂಪರ್ಕ ಕಲ್ಪಿಸಿದ ವರ್ಷದೊಂದಿಗೆ ವಿವರ ನೀಡುವುದು)

## ರೈತರ ಪಂಪ್‌ಸೆಟ್ ಅಕ್ರಮ-ಸಕ್ರಮದ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೦೧ (೧೫೫೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರ ಪಂಪ್‌ಸೆಟ್‌ಗಳ ಅಕ್ರಮ-ಸಕ್ರಮ ಎಂದಿನಿಂದ ಜಾರಿಗೆ ಬಂದಿದೆ ;

(ಆ) ಅಕ್ರಮ-ಸಕ್ರಮ ಮಾಡಲು ಅನುಸರಿಸುವ ಮಾನದಂಡವೇನು ;

(ಇ) ತುರುವೇಕೆರೆ ತಾಲ್ಲೂಕಿನಲ್ಲಿ ಅಕ್ರಮ-ಸಕ್ರಮ ಬಂದ ಮೇಲೆ ಎಷ್ಟು ರೈತರು ಹಣಪಾವತಿಸಿ ಅರ್ಜಿ ಸಲ್ಲಿಸಿದ್ದಾರೆ ;

(ಈ) ಹಾಗಿದ್ದಲ್ಲಿ, ಹಣ ಪಾವತಿಸಿರುವ ಎಷ್ಟು ರೈತರಿಗೆ ಈಗಾಗಲೇ ಸಕ್ರಮ ಮಾಡಿಕೊಡಲಾಗಿದೆ ;

(ಉ) ಹಣ ಪಾವತಿಸಿದ್ದರೂ ಸಾಮಗ್ರಿಗಳ ಕೊರತೆಯಿಂದಾಗಿ ರೈತರನ್ನು ಅಲೆದಾಡಿಸುತ್ತಿರುವುದು ನಿಜವೇ ;

(ಊ) ತುರುವೇಕೆರೆ ತಾಲ್ಲೂಕಿಗೆ ಸಕ್ರಮ ಮಾಡಲು ಯಾರಿಗೆ ಗುತ್ತಿಗೆ ನೀಡಲಾಗಿದೆ; ಗುತ್ತಿಗೆ ನೀಡಿರುವವರು ಸರಿಯಾದ ಸಮಯದಲ್ಲಿ ರೈತರಿಗೆ ಸಕ್ರಮ ಮಾಡದಿರಲು ಕಾರಣವೇನು; ಯಾವಾಗ ಸರಿಪಡಿಸಲಾಗುವುದು ?

## ರಾಮನಗರ-ಅನಂತಪುರ ರಸ್ತೆ ಕಾಮಗಾರಿ ಕಳಪೆ ಮಾಡುತ್ತಿರುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೦೨ (೧೫೫೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎಸ್.ಎಚ್.ಡಬ್ಲ್ಯೂ.ಡಿ.ಪಿ (State Highway Development Project) ರಾಮನಗರ-ಅನಂತಪುರ ೧೦೭.೪೦ ರಿಂದ ೧೪೫.೪೦ರ ತುರುವೇಕೆರೆ ತಾಲ್ಲೂಕಿನ ಕಾಮಗಾರಿ ಯಾವಾಗ ಪ್ರಾರಂಭವಾಗಿದೆ ;

(ಆ) ಸದರಿ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಗೆದಾರರು ಯಾರು; ಗುತ್ತಿಗೆ ನೀಡುವಲ್ಲಿ ಅನುಸರಿಸಿರುವ ಮಾನದಂಡವೇನು ;

(ಇ) ರಸ್ತೆಯ ಗುಣಮಟ್ಟ ಹಾಗೂ ಮಣ್ಣು ಪರೀಕ್ಷೆ ಮಾಡಲಾಗಿದೆಯೇ ;

(ಈ) ಮಂಜೂರಾದ ಮಾರ್ಗ ಹಾಗೂ ಅಂದಾಜು ಪಟ್ಟಿಯ ಪ್ರಕಾರ ಕಾಮಗಾರಿ ನಡೆಯುತ್ತಿದೆಯೇ ;

(ಉ) ಕಾಮಗಾರಿಯ ಪೂರ್ಣ ವಿವರ ಹಾಗೂ ಸೇತುವೆಗಳು, ಹಳ್ಳಗಳು, ಹಾಲಿ ಇರುವ ಹಾಗೂ ಹೊಸದಾಗಿ ಮಾಡುವ ಕೆಲಸದ ಪ್ರತಿಯೊಂದು ಮಾಹಿತಿ ನೀಡುವುದು ;

(ಊ) ಯಾವ-ಯಾವ ಕಾಮಗಾರಿಗೆ ಎಷ್ಟೆಷ್ಟು ಮೊತ್ತ ನಿಗಧಿ ಮಾಡಲಾಗಿದೆ; ಕಾಮಗಾರಿವಾರು ವಿವರ ನೀಡುವುದು; ಪ್ರಾಜೆಕ್ಟ್ ಮಾನಿಟರಿಂಗ್‌ನಿಂದ ನಿರ್ವಹಣೆ ಬಗ್ಗೆ ಮಾಹಿತಿ ನೀಡುವುದು ;

(ಋ) ಕಳಪೆ ಕಾಮಗಾರಿ ಮಾಡುತ್ತಿರುವುದನ್ನು ಕೂಡಲೇ ನಿಲ್ಲಿಸಿ ಮೂರನೇ ವ್ಯಕ್ತಿ ತಪಾಸಣೆ ಮಾಡಲಾಗುವುದೇ ?

## ರಾಜ್ಯದಲ್ಲಿರುವ ಮಾರುಕಟ್ಟೆ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೦೩ (೧೫೬೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಮಾರುಕಟ್ಟೆಗಳ ಸಂಖ್ಯೆ ಎಷ್ಟು ಹಾಗೂ ಅವು ಯಾವುವು; ರೈತರು ಬೆಳೆದ ಯಾವ-ಯಾವ ಪದಾರ್ಥಗಳನ್ನು ಕೊಂಡು ಮಾರಾಟ ಮಾಡಲಾಗುತ್ತಿದೆ ; (ಮಾರುಕಟ್ಟೆವಾರು ಮಾಹಿತಿ ನೀಡುವುದು)

(ಆ) ಇ-ಟೆಂಡರ್‌ನಿಂದ ರೈತರಿಗೆ ಉಪಯೋಗ ಮಾಡಲಾಗುವುದೆ ;

(ಇ) ಯಾವ-ಯಾವ ಮಾರುಕಟ್ಟೆಗಳಲ್ಲಿ ಇನ್ನೂ ದಲ್ಲಾಳಿಗಳ ಮುಖಾಂತರ ವ್ಯಾಪಾರ ನಡೆಯುತ್ತಿದೆ ;

(ಈ) ಹಾಗಿದ್ದಲ್ಲಿ, ಇದನ್ನು ತಪ್ಪಿಸಿ ರೈತರ ಬವಣೆ ನಿವಾರಣೆ ಮಾಡಲು ಏನು ಕ್ರಮ ಕೈಗೊಳ್ಳಲಾಗಿದೆ ?

## ಕೃಷಿ ಭಾಗ್ಯ ಯೋಜನೆ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೦೪ (೧೫೫೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಭಾಗ್ಯ ಯೋಜನೆ ಜಾರಿಗೆ ಬಂದಿದ್ದು ಯಾವಾಗ ;

(ಆ) ಈ ಯೋಜನೆಯ ಮಾನದಂಡಗಳೇನು; ಆಯ್ಕೆ ವ್ಯವಸ್ಥೆ ಬಗ್ಗೆ ಮಾಹಿತಿ ನೀಡುವುದು ;

(ಇ) ತುರುವೇಕೆರೆ ತಾಲ್ಲೂಕಿನಲ್ಲಿ ಈ ಯೋಜನೆ ಜಾರಿಗೆ ಬಂದ ಮೇಲೆ ಎಷ್ಟು ರೈತರನ್ನು ಆಯ್ಕೆ ಮಾಡಲಾಗಿದೆ; ಆಯ್ಕೆ ಪ್ರಕ್ರಿಯೆಗೆ ಅನುಸರಿಸಲಾದ ಮಾನದಂಡಗಳೇನು ;

(ಈ) ಯಾವ-ಯಾವ ಹಳ್ಳಿಯಿಂದ ಎಷ್ಟು ಜನ ರೈತರನ್ನು ಆಯ್ಕೆ ಮಾಡಲಾಗಿದೆ ? (ಆಯ್ಕೆಯಾಗಿರುವ ರೈತರ ಹೆಸರು, ವಿಳಾಸ ಸಮೇತ ಪೂರ್ಣ ವಿವರ ನೀಡುವುದು)

## ತುರುವೇಕೆರೆ ಲೋಕೋಪಯೋಗಿ ಕಛೇರಿ ಕೆಲಸ ಸ್ಥಗಿತವಾಗಿರುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೦೫(೧೫೫೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುರುವೇಕೆರೆ ನಗರದಲ್ಲಿ ಲೋಕೋಪಯೋಗಿ ಕಚೇರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಕೆಲಸ ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು; ಯಾವ ಮಾನದಂಡದ ಮೇಲೆ ಗುತ್ತಿಗೆ ನೀಡಲಾಗಿದೆ ;

(ಇ) ಕಾಮಗಾರಿ ಯಾವಾಗ ಆರಂಭವಾಗಿದೆ ಮತ್ತು ಯಾವಾಗ ಪೂರ್ಣವಾಗಬೇಕಿತ್ತು; ಮುಕ್ತಾಯಗೊಳ್ಳಬೇಕಾಗಿದ್ದು ಯಾವಾಗ ;

(ಈ) ಸದರಿ ಕಟ್ಟಡ ಕಾಮಗಾರಿಯು ವಿಳಂಬ/ಸ್ಥಗಿತಗೊಳ್ಳಲು ಕಾರಣವೇನು; ಪ್ರಸ್ತುತ ವರ್ಷದಲ್ಲಿ ಕಾಮಗಾರಿಯನ್ನು ಪೂರ್ಣ ಮಾಡಲಾಗುವುದೇ ?

## ವಿದ್ಯುತ್ ಬಿಲ್ ಪಾವತಿಸಲು ಎಟಿಪಿ ಸೌಲಭ್ಯ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):-**

೧೩೦೬ (೧೫೬೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಸ್ಕಾಂ ವಿದ್ಯುತ್ ಬಿಲ್ ಪಾವತಿಸಲು ಎಟಿಪಿ ಸೌಲಭ್ಯ ಕಲ್ಪಿಸಿದ್ದು ಯಾವಾಗ; ಇದರ ವಿಶೇಷತೆ ಏನು ;

(ಆ) ಬೆಂಗಳೂರಿನಲ್ಲಿ ಎಷ್ಟು ಎಟಿಪಿಗಳನ್ನು ಅಳವಡಿಸಲಾಗಿತ್ತು; ಇವುಗಳನ್ನು ಶೇಕಡಾ ಎಷ್ಟು ಗ್ರಾಹಕರು ಬಳಸುತ್ತಿದ್ದರು ;

(ಇ) ಸದರಿ ಸೇವೆಯನ್ನು ಸ್ಥಗಿತಗೊಳಿಸಿರುವುದು ನಿಜವೆ; ಇದಕ್ಕೆ ಕಾರಣವೇನು; ಇದರಿಂದ ಗ್ರಾಹಕರಿಗೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಸೌಲಭ್ಯವನ್ನು ಪುನಃ ಪ್ರಾರಂಭಿಸಲು ಉದ್ದೇಶಿಸಲಾಗಿದೆಯೇ; ಇಲ್ಲವಾದಲ್ಲಿ, ಈಗಿರುವ ಹಳೆಯ ವ್ಯವಸ್ಥೆಯನ್ನು ಹೊರತುಪಡಿಸಿ ಪರ್ಯಾಯ ನೂತನ ವ್ಯವಸ್ಥೆ ಏನು ?

## ಔಷಧ ವನಗಳ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):-**

೧೩೦೭ (೧೫೬೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸಿ.ಎಂ.ಸಿ., ಮತ್ತು ಟಿ.ಎಂ.ಸಿ. ವ್ಯಾಪ್ತಿಯಲ್ಲಿ ಬರುವ ಅರಣ್ಯೇತರ ಪ್ರದೇಶಗಳಲ್ಲಿ ಔಷಧ ವನಗಳ ಒಟ್ಟು ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಉದ್ಯಾನವನ ನಿರ್ಮಾಣ ಮಾಡುವ ಜಾಗದಲ್ಲಿಯೇ ಔಷಧಿಯ ಸಸ್ಯಗಳನ್ನು ನೆಡುವ ಮೂಲಕ ಉದ್ಯಾನವನವನ್ನು ಔಷಧವನವನ್ನಾಗಿಸಲು ಕೈಗೊಳ್ಳುವ ಕ್ರಮಗಳೇನು ;

(ಇ) ಪ್ರತಿ ತಾಲ್ಲೂಕಿಗೆ ಕನಿಷ್ಠ ಒಂದರಂತೆ ಅರಣ್ಯೇತರ ಪ್ರದೇಶಗಳಲ್ಲಿ ಔಷಧವನ ನಿರ್ಮಾಣ ಮಾಡಲು ಸರ್ಕಾರ ಮುಂದಾಗುವುದೇ ?

## ಕೃಷಿ ಉತ್ಪನ್ನ ಮಾರುಕಟ್ಟೆ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):-**

೧೩೦೮ (೧೫೬೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ದಾಸನಪುರದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ನಿರ್ಮಿಸಲಾಗಿದೆಯೇ; ಇದನ್ನು ಎಷ್ಟು ವೆಚ್ಚದಲ್ಲಿ ಯಾವಾಗ ನಿರ್ಮಿಸಲಾಯಿತು; ಇದರಲ್ಲಿ ಎಷ್ಟು ಮಳಿಗೆಗಳಿವೆ; ಇದನ್ನು

ನಿರ್ಮಿಸಲು ಕಾರಣವೇನು; ಇಲ್ಲಿ ಸಾರ್ವಜನಿಕ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಲಾಗಿದೆಯೇ ; (ವಿವರ ನೀಡುವುದು)

(ಆ) ಪ್ರಸ್ತುತ ಎಷ್ಟು ಮಳಿಗೆಗಳನ್ನು ವರ್ತಕರು ಪಡೆದಿರುತ್ತಾರೆ; ಬಹುತೇಕ ಮಳಿಗೆಗಳು ಖಾಲಿಯಿರಲು ಕಾರಣವೇನು; ಸದರಿ ಮಳಿಗೆಗಳಿಗೆ ಹೆಚ್ಚಿನ ಬಾಡಿಗೆ ನಿಗಧಿಪಡಿಸಿರುವುದರಿಂದ ಶೇಕಡಾ ೨೫ರಷ್ಟು ದರ ಇಳಿಸಬೇಕೆಂಬ ಬೇಡಿಕೆ ಇರುವುದು ನಿಜವೇ; ಈ ಸಂಬಂಧ ಸರ್ಕಾರ ಬಾಡಿಗೆ ದರ ಇಳಿಸಲು ಮುಂದಾಗುವುದೇ; ಎಷ್ಟು ಪ್ರಮಾಣದಲ್ಲಿ ಬಾಡಿಗೆ ಇಳಿಸಲು ನಿರ್ಧರಿಸಲಾಗಿದೆ ?

## ಅಡಿಕೆ ಹಾಗೂ ಬಾಳೆ ಬೆಳೆಗೆ ರೋಗ ತಗುಲಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೩೭೯ (೧೫೬೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆಗೆ ಹಳದಿ ಎಲೆ ರೋಗ ಬಾಳೆಗೆ ಎಲೆಸುರಳಿ ಹುಳು ಬಾಧೆ ತಗುಲಿರುವುದು ನಿಜವೇ; ನಿಜವಾಗಿದ್ದಲ್ಲಿ, ರಾಜ್ಯದ ಯಾವ ಯಾವ ಭಾಗಗಳಲ್ಲಿ ಈ ಬಾಧೆ ತಗುಲಿದೆ; ಇದಕ್ಕೆ ಕಾರಣವೇನು ;

(ಆ) ಈ ರೋಗಗಳನ್ನು ನಿಯಂತ್ರಿಸಲು ಯಾವ ರೀತಿಯ ಔಷಧಗಳನ್ನು ಸಿಂಪಡಿಸಬೇಕು; ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಈ ರೋಗ ಬಾಧೆಯಿಂದ ಉಂಟಾಗಿರುವ ನಷ್ಟದ ಪ್ರಮಾಣ ಎಷ್ಟು; ಆಗಿರುವ ನಷ್ಟಕ್ಕೆ ಸರ್ಕಾರದಿಂದ ಒದಗಿಸಲಾಗುವ ಪರಿಹಾರವೇನು ?

## ಕೈಗಾರಿಕಾ ತರಬೇತಿ ಕೇಂದ್ರಗಳಲ್ಲಿ ಕೃಷಿ ಕುರಿತು ತರಬೇತಿ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೦ (೧೫೬೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದೇ ರೀತಿಯ ಬೆಳೆಗಳನ್ನು ಬೆಳದ ರೈತರು ಬೆಲೆ ಕುಸಿತದಿಂದ ನಷ್ಟ ಅನುಭವಿಸಿ ಹತಾಶರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರೈತರಿಗೆ ಪರ್ಯಾಯ ಕೃಷಿ ಪದ್ಧತಿಗಳನ್ನು ಅನುಸರಿಸಲು ಸೂಕ್ತ ತರಬೇತಿಗಳನ್ನು ನೀಡಲಾಗುವುದೆ ;

(ಇ) ಬೆಲೆ ಕುಸಿತದಿಂದ ರೈತರನ್ನು ಪಾರು ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ;

(ಈ) ಕೈಗಾರಿಕಾ ತರಬೇತಿ ಕೇಂದ್ರಗಳಲ್ಲಿಯೂ ಕೃಷಿ ಕುರಿತು ತರಬೇತಿ ನೀಡಲಾಗುವುದೆ ?

## ಸಹಕಾರ ಚಳುವಳಿಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ಸದಸ್ಯರು ಪಾಲ್ಗೊಳ್ಳುವುದು

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೧ (೧೫೬೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರು ಸಹಕಾರ ಚಳುವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತಾಗಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು ;

(ಆ) ಸದರಿ ವರ್ಗದ ಸದಸ್ಯರು ಸಹಕಾರ ಸಂಘ–ಸಂಸ್ಥೆಗಳು ನೀಡುವ ಸೌಲಭ್ಯಗಳ ಪ್ರಯೋಜನವನ್ನು ಪಡೆಯುವಂತೆ ಯಾವ ಯೋಜನೆಗಳನ್ನು ರೂಪಿಸಿದೆ ;

(ಇ) ಸದರಿ ವರ್ಗದ ಸದಸ್ಯರುಗಳಿಗೆ ಯಶಸ್ವಿನಿ ಯೋಜನೆಯ ಪೂರ್ಣಲಾಭ ಲಭಿಸುವಂತೆ ಸರ್ಕಾರ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆಯೆ ?

## ಹುಬ್ಬಳ್ಳಿ–ಧಾರವಾಡ ಬೈ ಪಾಸ್ ರಸ್ತೆ ಅಭಿವೃದ್ಧಿ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೨ (೧೫೬೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೈಸ್ ಕಂಪನಿಯ ನಿರ್ವಹಣೆಯಲ್ಲಿರುವ ಹುಬ್ಬಳ್ಳಿ–ಧಾರವಾಡ ಬೈಪಾಸ್ ರಸ್ತೆಯಲ್ಲಿ ದ್ವಿಮುಖ ವಾಹನ ಸಂಚಾರದ ದಟ್ಟಣೆಯಿಂದ ಅಪಘಾತಗಳು ಹೆಚ್ಚುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಪಘಾತಗಳನ್ನು ತಡೆಗಟ್ಟಲು ಸದರಿ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಗಳ ಮಾನದಂಡ ಅನ್ವಯ ಅಭಿವೃದ್ಧಿ ಪಡಿಸಲಾಗುವುದೆ ;

(ಇ) ಪ್ರಸ್ತುತ ಸದರಿ ರಸ್ತೆಗೆ ಅಗತ್ಯವಾದ ರಿಪೇರಿ ಮತ್ತು ಅಗಲೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗುವುದೆ ?

## ಅಲ್ಪಸಂಖ್ಯಾತರ ಅಭಿವೃದ್ಧಿ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧೩ (೧೫೬೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲ್ಪಸಂಖ್ಯಾತರ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಆ) ಸದರಿ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯುವಲ್ಲಿ ಯಾವ ಯಾವ ಪ್ರೋತ್ಸಾಹಗಳನ್ನು ನೀಡಲಾಗುತ್ತಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಅಲ್ಪಸಂಖ್ಯಾತರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ ? (ವರ್ಷಾವಾರು ವಿವರ ನೀಡುವುದು)

## ಉತ್ತರ ಕರ್ನಾಟಕದ ರಸ್ತೆಗಳ ಅಭಿವೃದ್ಧಿ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧೪ (೧೬೫೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕದ ಅಭಿವೃದ್ಧಿ ವಂಚಿತ ಜಿಲ್ಲೆಗಳಲ್ಲಿ ಉತ್ತಮ ರಸ್ತೆಗಳನ್ನು ನಿರ್ಮಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಆ) ಈ ದಿಶೆಯಲ್ಲಿ ರಸ್ತೆ ಕಾಮಗಾರಿಗಳಿಗಾಗಿ ಹಂಚಿಕೆ ಮಾಡಲಾದ ಹಣವೆಷ್ಟು ; ಜಿಲ್ಲಾವಾರು ವಿವರಗಳನ್ನು ನೀಡುವುದು ;

(ಇ) ಕಳೆದ ವರ್ಷದಲ್ಲಿ ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಎಷ್ಟು ಕಿ.ಮೀ. ರಸ್ತೆ ಅಭಿವೃದ್ಧಿ ಪಡಿಸಲಾಗಿದೆ ?

## ಕೃಷಿ ವಿಶ್ವ ವಿದ್ಯಾಲಯಗಳನ್ನು ಇಂಟಿಗ್ರೇಟಡ್ ವಿಶ್ವ ವಿದ್ಯಾಲಯಗಳನ್ನಾಗಿಸುವುದು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೩೧೫ (೧೫೬೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ಅವು ಯಾವುವು, ಸದರಿ ವಿಶ್ವ ವಿದ್ಯಾಲಯಗಳು ಸ್ಥಾಪನೆಗೊಂಡಿದ್ದು ಯಾವಾಗ, ಎಲ್ಲೆಲ್ಲಿ ಸ್ಥಾಪಿಸಲಾಗಿದೆ ;

(ಆ) ಸದರಿ ವಿಶ್ವ ವಿದ್ಯಾಲಯಗಳು ತೋಟಗಾರಿಕೆ, ಪಶುಸಂಗೋಪನೆ ಹೀಗೆ ವಿಂಗಡನೆಯಾಗಿ ಎಷ್ಟು ವಿಶ್ವ ವಿದ್ಯಾಲಯಗಳಿರುತ್ತವೆ ;

(ಇ) ಇಂಟಿಗ್ರೇಟೆಡ್ ವಿಶ್ವ ವಿದ್ಯಾಲಯಗಳನ್ನು ಮಾಡಲು ಸರ್ಕಾರ ಏನಾದರೂ ಕ್ರಮ ಕೈಗೊಳ್ಳುವುದೆ ; ಹಾಗೆ ಕ್ರಮಕೈಗೊಂಡರೇ ರೈತರಿಗೆ ಸಹಾಯವಾಗುವುದಿಲ್ಲವೆ ;

(ಈ) ಈ ಬಗ್ಗೆ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು ?

## ರೈತ ಭವನಗಳ ಸ್ಥಾಪಿಸುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೧೬ (೧೫೯೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರಿಗೆ ಅನುಕೂಲವಾಗಲು "ರೈತ ಭವನ" ಗಳನ್ನು ಸ್ಥಾಪಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

D.E.E-Vol-II-
F-9-D/D

(ಆ) ಹಾಗಿದ್ದಲ್ಲಿ, ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ರೈತ ಭವನಗಳನ್ನು ನಿರ್ಮಿಸಲಾಗಿದೆ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ರೈತ ಭವನಗಳನ್ನು ಸ್ಥಾಪಿಸಲಾಗುವುದು ; (ವಿವರ ನೀಡುವುದು)

(ಈ) ೨೦೧೪-೨೦೧೫ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ನಿರ್ಮಿಸಿಲಾದ ರೈತ ಭವನಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಯಶಸ್ವಿನಿ ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೧೭ (೧೫೭೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯಶಸ್ವಿನಿ ಯೋಜನೆಯಡಿ ಸನ್ ೨೦೧೪-೧೫ನೇ ಸಾಲಿನಲ್ಲಿ ಕಾಯ್ದಿರಿಸಲಾಗಿರುವ ಅನುದಾನ ಎಷ್ಟು ; ಆ ಪೈಕಿ ಖರ್ಚಾಗಿರುವ ಅನುದಾನ ಎಷ್ಟು ; ಸದರಿ ಯೋಜನೆಯ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ೨೦೧೪-೧೫ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಎಷ್ಟು ಜನರು ಈ ಯೋಜನೆಡಯಡಿ ಸೇರ್ಪಡೆ ಆಗಿರುತ್ತಾರೆ, ಸದರಿ ಫಲಾನುಭವಿಗಳಿಂದ ಸಂಗ್ರಹಿಸಲು ವಂತಿಕೆ ಎಷ್ಟು ;

(ಇ) ಈ ಯೋಜನೆಯಡಿ ೨೦೧೪-೧೫ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಫಲಾನುಭವಿಗಳಲ್ಲಿ ಯಾವ ಯಾವ ಖಾಯಿಲೆಗೆ ಎಷ್ಟು ಜನರು ಚಿಕಿತ್ಸೆ ಪಡೆದಿರುತ್ತಾರೆ ; ಆ ಪೈಕಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಫಲಾನುಭವಿಗಳ ಸಂಖ್ಯೆ ಎಷ್ಟು ; ಇದರ ಚಿಕಿತ್ಸೆಗಾಗಿ ಖರ್ಚಾದ ಮೊತ್ತ ಎಷ್ಟು ; (ತಾಲ್ಲೂಕುವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿಯಲ್ಲಿ ಸರ್ಕಾರವು ಮಂಜೂರಾತಿ ನೀಡುವಲ್ಲಿ ವಿಳಂಬವಾಗಿ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳಾವುವು ?

## ಶೂನ್ಯ ಬಡ್ಡಿ ದರದಲ್ಲಿ ರೈತರಿಗೆ ಸಾಲ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೮ (೧೫೭೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೪–೧೫ನೇ ಸಾಲಿನಲ್ಲಿ ಎಷ್ಟು ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ವಿತರಿಸಲಾಗಿದೆ ;

(ಆ) ಬೆಳಗಾವಿ ಜಿಲ್ಲೆಯಲ್ಲಿ ೨೦೧೪–೧೫ನೇ ಸಾಲಿನಲ್ಲಿ ಯಾವ ಪ್ರಮಾಣದಲ್ಲಿ ಎಷ್ಟು ಸಾಲ ವಿತರಿಸಲಾಗಿದೆ ; ಅದಕ್ಕೆ ವಿಧಿಸಲಾಗಿರುವ ಬಡ್ಡಿ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಷ್ಟು ಜನ ರೈತರಿಗೆ ಯಾವ ಮೊತ್ತದ ಸಾಲ ವಿತರಿಸಲಾಗಿದೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ೧.೬ ಲಕ್ಷ ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮು ನಿರ್ಮಾಣ ಮಾಡಿರುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೯೯ (೧೫೭೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೧.೬ ಲಕ್ಷ ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮುಗಳನ್ನು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಈ ಯೋಜನೆಯಡಿ ೨೦೧೪-೧೫ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಗೋದಾಮುಗಳನ್ನು ನಿರ್ಮಾಣ ಮಾಡಲಾಗಿದೆ ; ಯಾವ ಯಾವ ಸ್ಥಳದಲ್ಲಿ ನಿರ್ಮಾಣ ಮಾಡಲಾಗಿದೆ ;

(ಇ) ಅವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ಮತ್ತು ನಿರ್ಮಾಣ ಹಂತದಲ್ಲಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಈ) ಸದರಿ ಕಾಮಗಾರಿಗಳಿಗೆ ತಗುಲಿರುವ ಅಂದಾಜು ವೆಚ್ಚ ಎಷ್ಟು ? (ಕಾಮಗಾರಿವಾರು ವಿವರ ನೀಡುವುದು)

## ಪ್ರಿಯದರ್ಶಿನಿ ಯೋಜನೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೦ (೧೫೭೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಪ್ರಿಯದರ್ಶಿನಿ" ಯೋಜನೆಯಡಿ ಮಹಿಳಾ ಸಹಕಾರಿ ಸಂಘಗಳ ಸ್ಥಾಪನೆಗೆ ಇರುವ ಮಾನದಂಡಗಳೇನು ;

(ಆ) "ಪ್ರಿಯದರ್ಶಿನಿ" ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಮಹಿಳಾ ಸಹಕಾರಿ ಸಂಘಗಳನ್ನು ಸ್ಥಾಪಿಸಲಾಗಿದೆ ಮತ್ತು ಅವುಗಳಿಗೆ ಎಷ್ಟು ಷೇರುಧನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಗಾಗಿ ಬೆಳಗಾವಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಸದರಿ ಅನುದಾನ ಸದ್ಭಳಕೆಯಾಗಿದೆಯೇ ? (ವಿವರ ನೀಡುವುದು)

## ಜಿಲ್ಲೆಯಲ್ಲಿನ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೧ (೧೫೭೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ನಗರಸಭೆ ಮತ್ತು ಪಟ್ಟಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಯಾವ ಯಾವ ಪ್ರದೇಶಗಳು ಬರುತ್ತವೆ ; (ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ನಗರಸಭೆ, ತಾಲ್ಲೂಕು ಪಂಚಾಯತ್ ಹಾಗೂ ಪಟ್ಟಣ ಪಂಚಾಯಿತಿಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಮಾಹಿತಿ ಒದಗಿಸುವುದು)

(ಇ) ಸರ್ಕಾರ ಬಿಡುಗಡೆ ಮಾಡಿರುವ ಅನುದಾನದಲ್ಲಿ ಖರ್ಚು ಮಾಡಿದ ಮೊತ್ತವೆಷ್ಟು ; ಉಳಿತಾಯವಾದ ಮೊತ್ತ ಎಷ್ಟು ; (ಮಾಹಿತಿ ನೀಡುವುದು)

(ಈ) ಅನುದಾನವನ್ನು ಸಂಪೂರ್ಣವಾಗಿ ಬಳಕೆ ಮಾಡಿಕೊಳ್ಳದಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ವಿವಿಧ ಲೆಕ್ಕ ಶೀರ್ಷಿಕೆಯಡಿ ಕೈಗೊಂಡ ಕಾಮಗಾರಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** :-

೧೩೨೨ (೧೫೮೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕಿಗೆ ಲೋಕೋಪಯೋಗಿ ಇಲಾಖೆಯು ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಬಿಡುಗಡೆಗೊಂಡ ಅನುದಾನ ಎಷ್ಟು ; (ತಾಲ್ಲೂಕುವಾರು ಶೀರ್ಷಿಕೆವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; (ಶೀರ್ಷಿಕೆವಾರು ಕಾಮಗಾರಿಗಳವಾರು ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಲೆಕ್ಕ ಶೀರ್ಷಿಕೆಗಳಡಿ ಕೈಗೊಂಡ ಕಾಮಗಾರಿಗಳು ಯಾವ ಯಾವ ಹಂತದಲ್ಲಿವೆ ; ಇವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಈ) ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಸದರಿ ಕಾಮಗಾರಿಗಳನ್ನು ಪ್ರಸ್ತುತ ಸಾಲಿನಲ್ಲಿ ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಕಾಮಗಾರಿಗಳ ಗುತ್ತಿಗೆ ನಿರ್ವಹಿಸುತ್ತಿರುವವರು ಯಾರು ? (ಅವರ ಹೆಸರಿನೊಂದಿಗೆ ಪೂರ್ಣ ವಿವರ ನೀಡುವುದು)

## ರೈತರಿಗೆ ಕೃಷಿ ಉಪಕರಣಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೨೩ (೧೫೮೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಗೆ ಕಳೆದ ಎರಡು ವರ್ಷಗಳಲ್ಲಿ ಹನಿ ನೀರಾವರಿ, ಭೂ ಚೇತನ, ಆತ್ಮ ಯೋಜನೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಈ ಯೋಜನೆಯಡಿಯಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಆಯ್ಕೆ ಮಾಡಲು ನಿಗದಿಪಡಿಸಿದ ಮಾನದಂಡಗಳೇನು ; ರೈತರಿಂದ ಸಲ್ಲಿಕೆಯಾಗಿದ್ದ ಅರ್ಜಿಗಳ ಸಂಖ್ಯೆ ಎಷ್ಟು ; ಆ ಪೈಕಿ ಆಯ್ಕೆಯಾದ ಸಂಖ್ಯೆ ಎಷ್ಟು ; ಆಯ್ಕೆ ಮಾಡದಿರಲು ಕಾರಣಗಳೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಆಧುನಿಕ ಕೃಷಿ ಉಪಕರಣಗಳು, ಪವರ್ ಟ್ರೇಲ್ಲರ್, ಟ್ರ್ಯಾಕ್ಟರ್, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಕೃಷಿ ಉಪಕರಣಗಳನ್ನು ಕೊಳ್ಳಲು ನೀಡುವ ಸಹಾಯಧನಕ್ಕೆ ಸಲ್ಲಿಕೆಯಾಗಿದ್ದ ಸಾಮಾನ್ಯ ವರ್ಗದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರ ಅರ್ಜಿಗಳ ಸಂಖ್ಯೆ ಎಷ್ಟು ; ಫಲಾನುಭವಿಗಳನ್ನು ಆಯ್ಕೆ ಮಾಡಲು ಸರ್ಕಾರ ವಿಧಿಸಿದ ಮಾರ್ಗಸೂಚಿಗಳೇನು ;

(ಈ) ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಆಯ್ಕೆ ಮಾಡದೆ ಇರಲು ಸರ್ಕಾರಕ್ಕಿರುವ ಅಡೆ-ತಡೆಗಳೇನು ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ರೈತರ ಬೆಳೆಗೆ ಸಹಾಯಧನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೨೪ (೧೫೮೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ರೈತರಿಗೆ ೨೦೧೪-೧೫ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಿಂದ ಸಹಾಯಧನ ನೀಡಲಾಗಿದೆಯೇ ; ನೀಡಿದ್ದಲ್ಲಿ ತಾಲ್ಲೂಕುವಾರು ವಿವರ ನೀಡುವುದು ;

(ಆ) ಜಿಲ್ಲೆಯಲ್ಲಿ ರೈತರಿಗೆ ಇಲಾಖೆಯ ವತಿಯಿಂದ ಯಾವ ಯಾವ ಬೆಳೆಗಳಿಗೆ ಶೇಕಡ ಎಷ್ಟು ಸಹಾಯಧನ ನೀಡಲಾಗಿದೆ ? (ರೈತರ ಹೆಸರಿನೊಂದಿಗೆ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಸಹಕಾರಿ ಸಂಘಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೨೫ (೧೫೮೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸಹಕಾರಿ ಸಂಘಗಳ ಸಂಖ್ಯೆ ಎಷ್ಟು ; (೧೯೫೯ ಸಹಕಾರಿ ಸಂಘಗಳ ಕಾಯ್ದೆಯನ್ವಯ ಹಾಗೂ ಸೌಹಾರ್ದ ಸಹಕಾರಿ ಸಂಘದ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಈ ಪೈಕಿ ಕಾರ್ಯನಿರತ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ನಿಷ್ಕ್ರಿಯ ಸಂಘಗಳ ಸಂಖ್ಯೆ ಎಷ್ಟು ; ಹಾಗೂ ಸಮಾಪನಾಗೊಂಡಿರುವ ಸಂಘಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೃಷಿ ಬೆಲೆ ಆಯೋಗದ ರಚನೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೨೬ (೧೫೮೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಜೆಟ್‌ನಲ್ಲಿ ಘೋಷಣೆ ಮಾಡಿದಂತೆ ಕೃಷಿ ಬೆಲೆ ಆಯೋಗವನ್ನು ರಚಿಸಲಾಗಿದೆಯೇ ; (ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಲ್ಲಿ ಕೃಷಿ ಉತ್ಪಾದನೆಗಳ ಬೆಲೆ ಸ್ಥಿರೀಕರಣ ಕುರಿತಾಗಿ ಕೃಷಿ ಬೆಲೆ ಆಯೋಗ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕೃಷಿ ಬೆಲೆ ಆಯೋಗದ ಮುಂದಿನ ಚಟುವಟಿಕೆಗಳೇನು ? (ವಿವರ ನೀಡುವುದು)

## ಬಂಟ್ವಾಳ ತಾಲ್ಲೂಕಿನ ಕಾಡುಬೆಟ್ಟು ಗ್ರಾಮದಲ್ಲಿ ಹೈ ಟೆನ್‌ಷನ್ ವಿದ್ಯುತ್ ತಂತಿ ಜೋತು ಬಿದ್ದಿರುವ ಬಗ್ಗೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೩೨೭ (೧೫೮೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಕಾಡುಬೆಟ್ಟು ಗ್ರಾಮದಲ್ಲಿ ಹೈ ಟೆನ್‌ಷನ್ ವಿದ್ಯುತ್ ತಂತಿ ಹಾದು ಹೋಗುವ ಕಂಬವೊಂದು ತಂತಿಗೆ ನೇತಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸುಮಾರು ೩೫ ವರ್ಷಗಳ ಹಿಂದೆ ಈ ಕಂಬವನ್ನು ಹಾಕಲಾಗಿದ್ದು ಈ ವಿದ್ಯುತ್ ಕಂಬವು ತುಕ್ಕು ಹಿಡಿದು ಬೀಳುವ ಪರಿಸ್ಥಿತಿಯಲ್ಲಿರುವುದು ಇಲಾಖೆಯವರ ಗಮನಕ್ಕೆ ಬಂದಿಲ್ಲವೇ ;

(ಇ) ಈ ಕಂಬದ ಸುತ್ತ ಮುತ್ತ ೬-೭ ಮನೆಗಳಿದ್ದು, ಈ ಹೈಟೆನ್‌ಷನ್ ವಿದ್ಯುತ್ ತಂತಿಗಳು ಜೋತು ಬಿದ್ದು ಅಕ್ಕ-ಪಕ್ಕದ ಮನೆಗಳ ಮೇಲೆ ಹಾದುಹೋಗಿದ್ದು ಹಲವಾರು ಬಾರಿ ಮೆಸ್ಕಾಂಗೆ ದೂರು ಮತ್ತು ಮನವಿಗಳನ್ನು ಕೊಟ್ಟಿದ್ದರೂ ಸಹ ಯಾವುದೇ ಕ್ರಮ ಜರುಗಿಸದೆ ಇರುವ ಅಧಿಕಾರಿಗಳ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಈ ಸಮಸ್ಯೆಯನ್ನು ಎಷ್ಟು ದಿನಗಳಲ್ಲಿ ಸರಿಪಡಿಸಲಾಗುವುದು ?

## ಎರೈತ್ರೋಸಿನ್–ಬಿ ರಾಸಾಯನಿಕ ಬಳಕೆಯ ನಿಷೇಧ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೨೮ (೧೫೮೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎರೈತ್ರೋಸಿನ್–ಬಿ ರಾಸಾಯನಿಕ ಬಳಸಿ ಕಲ್ಲಂಗಡಿ ಹಣ್ಣಿಗೆ ಬಣ್ಣ ಬರುವಂತೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎರೈತ್ರೋಸಿನ್–ಬಿ ರಾಸಾಯನಿಕವನ್ನು ಎಫ್‌ಡಿಎ ವಿಷ ಎಂದು ಘೋಷಿಸಿ ೧೯೯೦ರಲ್ಲೇ ನಿಷೇಧಿಸಿದ್ದರೂ ರಾಜ್ಯದಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ರಾಸಾಯನಿಕವನ್ನು ಮಾರಾಟ ಮಾಡುತ್ತಿರುವ ಹಾಗೂ ಇದನ್ನು ಹಣ್ಣುಗಳಿಗೆ ಸಿಂಪಡಿಸುತ್ತಿರುವ ವರ್ತಕರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿಗಳ ಮಾಹಿತಿ ಫಲಕಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೨೯ (೧೬೫೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಅಳವಡಿಸಲಾಗಿರುವ ಮಾಹಿತಿ ಫಲಕಗಳು ಸ್ಪಷ್ಟವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಫಲಕಗಳನ್ನು ಹಾಕಲು ಇರುವ ಮಾನದಂಡಗಳೇನು ;

(ಇ) ಈಗಿರುವ ಪೂರ್ಣ ಮತ್ತು ತಪ್ಪು ಮಾಹಿತಿಯಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಹಕಾರ ಸಂಘ ಸ್ಥಾಪಿಸುವ ಸಿದ್ಧನಗೌಡ ಪಾಟೀಲ ಕಣಗಿನಹಾಳ ಸಹಕಾರಿ ಸಂಘ ದಿವಾಳಿ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೩೦ (೧೫೫೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಸಹಕಾರಿ ಸಂಘ ಸ್ಥಾಪನೆ ಆಗಿದ್ದು, ಗದಗ ತಾಲ್ಲೂಕಿನ ಕಣಗಿನಹಾಳ ಗ್ರಾಮದಲ್ಲಿ ಎಂಬುದು ನಿಜವೇ ;

(ಆ) ಈ ಸಂಘ ಸ್ಥಾಪಿಸಿದ ಸಿದ್ಧನಗೌಡ ಪಾಟೀಲರವರ ಸೊಸೈಟಿಯೇ ಕಣಗಿನಹಾಳ ಸಹಕಾರಿ ಸಂಘ ಈಗ ದಿವಾಳಿ ಅಂಚಿನಲ್ಲಿ ಇರುವ ಸಂಗತಿ ನಿಜವೇ ;

(ಇ) ಈ ಸಂಘ ದಿವಾಳಿ ಅಂಚಿನಲ್ಲಿ ಇದ್ದರೂ ಕೂಡ ಈವರೆವಿಗೆ ಒಮ್ಮೆಯೂ ಉಪ ನಿಬಂಧಕರು ಹಾಗೂ ಜಂಟಿ ನಿಬಂಧಕರು ಸಹಕಾರಿ ಸಂಘ, ಬೆಳಗಾವಿ ಇವರು ಭೇಟಿ ಕೊಡದೇ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ಅದನ್ನು ಸುಧಾರಿಸಲು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಉಚ್ಚಮಟ್ಟದ ಸಹಕಾರಿ ಅಧಿಕಾರಿಗಳಿಗೆ ಹೆಚ್ಚಿನ ಬೇರೆ ಜವಾಬ್ದಾರಿ (Additional Charge) ಇರುವುದರಿಂದ ತಮ್ಮ ಮುಖ್ಯ ಹುದ್ದೆಯನ್ನು ಸರಿಯಾಗಿ ನಿರ್ವಹಿಸದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಾಪುರ ಜಿಲ್ಲೆಯ ಯಾವ ಉಚ್ಚಮಟ್ಟದ ಅಧಿಕಾರಿಗಳು ಹೆಚ್ಚಿನ ಬೇರೆ ಜವಾಬ್ದಾರಿ (Additional Charge) ಹೊಂದಿರುವರು ;

(ಊ) ಸಹಕಾರಿ ಇಲಾಖೆಯಲ್ಲಿ ಅಧಿಕಾರಿಗಳ ಕೊರತೆ ಇದೆಯೇ ; ಬೇರೆ ಅಧಿಕಾರಿಗಳಿಗೆ ಪದೋನ್ನತಿ ಕೊಡಬಾರದೆಂಬ ಉದ್ದೇಶದಿಂದ ಹೆಚ್ಚಿನ ಬೇರೆ ಜವಾಬ್ದಾರಿ (Additional Charge) ಕೊಡುತ್ತಿರುವ ಸಂಗತಿ ನಿಜವೇ ;

(ಋ) ಉತ್ತರ ಕರ್ನಾಟಕದಲ್ಲಿರುವ ಸಹಕಾರಿ ಸಂಘಗಳು ಅಧಿಕಾರಿಗಳ ನಿರ್ಲಕ್ಷತನದಿಂದ ದಿವಾಳಿ ಆಗುತ್ತಿರುವ ಸಂಗತಿ ಸರ್ಕಾರ ಗಮನಕ್ಕೆ ಬಂದಿದೆಯೇ ?

**ಹೋಬಳಿ ಕೇಂದ್ರದಲ್ಲಿ ಮಣ್ಣು ಪರೀಕ್ಷಾ (ಪರೀಕ್ಷೆ) ಕೇಂದ್ರ ಸ್ಥಾಪನೆ**

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೩೧ (೧೫೮೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಣ್ಣು ಪರೀಕ್ಷೆಯನ್ನು ಯಾವ ಯಾವ ಸ್ಥಳಗಳಲ್ಲಿ ಮಾಡಲಾಗುತ್ತಿದೆ ;

(ಆ) ಮಣ್ಣು ಪರೀಕ್ಷಾ ಕೇಂದ್ರಗಳನ್ನು ಪ್ರತಿಯೊಂದು ಹೋಬಳಿ ಮಟ್ಟದಲ್ಲಿ (ಗ್ರಾಮ ಪಂಚಾಯತಿ ಸ್ಥಳದಲ್ಲಿ) ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಮಣ್ಣು ಪರೀಕ್ಷೆ ಮಾಡಿ ಎಷ್ಟು ಪ್ರಮಾಣದಲ್ಲಿ ಗೊಬ್ಬರ ಹಾಕಬೇಕೆಂಬ ಬಗ್ಗೆ ಹಾಗೂ ಫಲವತ್ತತೆ ಬಗ್ಗೆ ಮಾಹಿತಿಯನ್ನು ತಿಳಿಸುವ ಕೆಲಸವನ್ನು ಯಾವ ಅಧಿಕಾರಿಗಳು ಮಾಡುತ್ತಾರೆ ;

(ಈ) ಮೊಬೈಲ್ ವ್ಯಾನ್‌ಗಳ ಮುಖಾಂತರ ರೈತರ ಹೊಲದಲ್ಲಿನ ಮಣ್ಣನ್ನು ಒಯ್ದು ಮಣ್ಣು ಪರೀಕ್ಷೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಅಕ್ರಮ ಐ.ಪಿ. ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೩೩೨ (೧೫೮೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಐ.ಪಿ. ಪಂಪ್‌ಸೆಟ್‌ಗಳನ್ನು ಅಕ್ರಮವಾಗಿ ಅಳವಡಿಸಲಾಗಿದೆ ;

(ಆ) ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಈ ವರ್ಷ ಸಮಯಕ್ಕೆ ಸರಿಯಾಗಿ ಮಳೆ ಆಗದೇ ಇರುವುದರಿಂದ ಹಾಗೂ ರೈತರು ತಾವು ಬೆಳೆದ ಬೆಳೆಗೆ ಯೋಗ್ಯ ದರ ದೊರಕದೇ ಇರುವುದರಿಂದ ರೈತರು ಕಂಗಾಲಾಗಿದ್ದು, ಇದೊಂದು ಬಾರಿ ರೈತರಿಂದ ಯಾವುದೇ ಹಣ ಸ್ವೀಕರಿಸದೇ ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲಾಗುವುದೇ ;

(ಈ) ರೈತರಿಂದ ಯಾವುದೇ ಹಣ ಸ್ವೀಕರಿಸದೇ ಸಕ್ರಮಗೊಳಿಸಿದಲ್ಲಿ, ಸರ್ಕಾರದ ಮೇಲೆ ಬೀಳಬಹುದಾದ ಆರ್ಥಿಕ ಹೊಣೆ ಎಷ್ಟು ;

(ಉ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಷ್ಟು ಅಕ್ರಮ ಪಂಪ್‌ಸೆಟ್‌ಗಳನ್ನು ಅಳವಡಿಸಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಜಿಲ್ಲಾ ಮುಖ್ಯ ರಸ್ತೆಗಳನ್ನು ರಾಜ್ಯ ಹೆದ್ದಾರಿಯನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೩೩ (೧೫೯೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಕಿಲೋಮೀಟರ್ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯರಸ್ತೆ ಇರುತ್ತವೆ ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಕಿಲೋಮೀಟರ್ ಜಿಲ್ಲಾ ಮುಖ್ಯರಸ್ತೆ ಇರುತ್ತವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ೨೨ ಸಕ್ಕರೆ ಕಾರ್ಖಾನೆಗಳಿರುವುದರಿಂದ ಕಬ್ಬು ತುಂಬಿದ ಭಾರಿ ವಾಹನಗಳು ಹೆಚ್ಚಾಗಿ ಈ ರಸ್ತೆಗಳ ಮೇಲೆ ಸಂಚರಿಸುತ್ತಿದ್ದು, ಈ ರಸ್ತೆಗಳನ್ನು ರಾಜ್ಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೆ ಏರಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ

**ಶ್ರೀ ಎ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೩೪ (೧೫೯೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರವು ಮೆಕ್ಕೆಜೋಳಕ್ಕೆ ಬೆಂಬಲ ಬೆಲೆಯನ್ನು ಘೋಷಿಸಿದೆಯೇ ; ಘೋಷಿಸಿದ್ದಲ್ಲಿ, ಬೆಂಬಲ ಬೆಲೆಯ ದರವೆಷ್ಟು; ಇದಕ್ಕಾಗಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆಯೇ ;

(ಆ) ಖರೀದಿ ಕೇಂದ್ರಕ್ಕೆ ಬೆಳೆ ತರಲು ಯಾವ ನಿಯಮಗಳನ್ನು ಅಳವಡಿಸಲಾಗಿದೆ ; ಕಳೆದ ಸಾಲಿಗೂ ಈ ಸಾಲಿಗೂ ಬೆಂಬಲ ಬೆಲೆಯ ವ್ಯತ್ಯಾಸ ದರ ಎಷ್ಟು ;

(ಇ) ಮೆಕ್ಕೆಜೋಳ ಖರೀದಿಗೆ ಕೇಂದ್ರಗಳನ್ನು ಪ್ರಾರಂಭಿಸಿದ್ದರೂ ಕೂಡಾ ರೈತರು ಬರದಿರಲು ಕಾರಣಗಳೇನು ;

(ಈ) ಹಲವು ನಿಯಮ-ನಿರ್ಬಂಧಗಳು ಹಾಗೂ ಹಣ ಪಾವತಿಯ ವಿಳಂಬದಿಂದಾಗಿ ರೈತರು ಖಾಸಗೀ ದಲ್ಲಾಳಿಗಳತ್ತ ಹೋಗುತ್ತಿರುವುದು ನಿಜವೇ ; ರೈತರನ್ನು ಆಕರ್ಷಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ? (ವಿವರ ನೀಡುವುದು)

## ಯಲಬುರ್ಗಾ ತಾಲ್ಲೂಕಿಗೆ ಶಾಶ್ವತ ಕುಡಿಯುವ ನೀರು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೫ (೧೬೭೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಯಲಬುರ್ಗಾ ಪಟ್ಟಣದ ಶಾಶ್ವತ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು ಯಾವಾಗ ;

(ಆ) ಸದರಿ ಕಾಮಗಾರಿಗೆಂದು ಪ್ರಸಕ್ತ ಸಾಲಿನವರೆಗೂ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಸದರಿ ಕಾಮಗಾರಿಯನ್ನು ಯಾವ ಗುತ್ತಿಗೆದಾರರು ನಿರ್ವಹಿಸುತ್ತಿದ್ದಾರೆ ; ಗುತ್ತಿಗೆ ಕರಾರಿನ್ವಯ ಕಾಮಗಾರಿಯನ್ನು ಯಾವ ದಿನಾಂಕಕ್ಕೆ ಮುಕ್ತಾಯಗೊಳಿಸಬೇಕಿತ್ತು ;

(ಈ) ಕಾಮಗಾರಿ ಯಾವ ಹಂತದಲ್ಲಿದೆ ; ವಿಳಂಬಕ್ಕೆ ಕಾರಣಗಳೇನು ;

(ಉ) ಯಲಬುರ್ಗಾ ಪಟ್ಟಣದಲ್ಲಿ ಕುಡಿಯುವ ನೀರಿನ ಸರಬರಾಜು ಯೋಜನೆಯ ಕಾಮಗಾರಿ ಯಾವ ಹಂತದಲ್ಲಿದೆ ;

(ಊ) ಸದರಿ ಕಾಮಗಾರಿಯನ್ನು ಯಾವ ದಿನಾಂಕಕ್ಕೆ ಮುಕ್ತಾಯಗೊಳಿಸಿ ಯೋಜನೆಯನ್ನು ಲೋಕಾರ್ಪಣೆ ಮಾಡಲಾಗುವುದು ?

## ನಗರ ಸ್ಥಳೀಯ ಸಂಸ್ಥೆ/ಮಹಾನಗರ ಪಾಲಿಕೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೭ (೧೬೦೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆ/ಮಹಾನಗರ ಪಾಲಿಕೆ/ಜಿಲ್ಲಾ ನಗರಾಭಿವೃದ್ಧಿ ಕೋಶ/ಪೌರಾಡಳಿತ ನಿರ್ದೇಶನಾಲಯದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಸದರಿ ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಸೇವೆಯನ್ನು ಸಲ್ಲಿಸುತ್ತಿದ್ದಾರೆ ;

(ಇ) ಸದರಿ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರಕಾರದ ಮುಂದಿದೆಯೇ ; ಇದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ;

(ಈ) ಕ್ರಮ ಕೈಗೊಂಡಿದ್ದಲ್ಲಿ, ಕೈಗೊಂಡಿರುವ ಕ್ರಮವನ್ನು ಎಷ್ಟು ಅವಧಿಯಲ್ಲಿ ಪೂರ್ಣಗೊಳಿಸಿ ಸಿಬ್ಬಂದಿಗಳನ್ನು ಖಾಯಂಗೊಳಿಸಲಾಗುವುದು ?

## ಕೃಷಿ ಭಾಗ್ಯ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೭ (೧೫೪೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆ ಸದ್ಯ ಯಾವ ಹಂತದಲ್ಲಿದೆ ;

(ಆ) ಈ ಯೋಜನೆಯಲ್ಲಿ ಆಯ್ಕೆ ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಇ) ಈ ಯೋಜನೆಯ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳೇನು ;

(ಈ) ಆಯ್ಕೆಯಾದ ಫಲಾನುಭವಿಗಳು ಯಾವ ಕಾಮಗಾರಿಗಳನ್ನು ನಿರ್ವಹಿಸಲು ಯೋಜನೆಯಲ್ಲಿ ಅವಕಾಶ ಕಲ್ಪಿಸಲಾಗಿದೆ ;

(ಉ) ಈಗಾಗಲೇ ಅನುಷ್ಠಾನಗೊಂಡ ಕಾಮಗಾರಿ ವಿವರಗಳನ್ನು ಹಾಗೂ ಪೂರ್ಣಗೊಂಡ ಕಾಮಗಾರಿಗಳಿಗೆ ಪಾವತಿ ಮಾಡಲಾದ ಅನುದಾನವೆಷ್ಟು ? (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

# ಕೊಪ್ಪಳ ನಗರದಲ್ಲಿ ಸದ್ಯ ಕೈಗೊಳ್ಳುತ್ತಿರುವ ಯು.ಜಿ.ಡಿ. ಕಾಮಗಾರಿಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೮ (೧೫೫೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ನಗರದಲ್ಲಿ ಸದ್ಯ ಕೈಗೊಳ್ಳುತ್ತಿರುವ ಯು.ಜಿ.ಡಿ. ಕಾಮಗಾರಿಯನ್ನು ಮತ್ತು ಯಾವ ಕಂಪನಿಗೆ ಗುತ್ತಿಗೆ ನೀಡಲಾಗಿದೆ ;

(ಆ) ಈ ಕಾರ್ಯಕ್ಕಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಯು.ಜಿ.ಡಿ. ಕಾರ್ಯ ಮಾಡಲು ರಸ್ತೆಯನ್ನು ಅಗೆದು ಕಾರ್ಯ ಮುಕ್ತಾಯದ ಬಳಿಕ ಪುನಃ ರಸ್ತೆ ನಿರ್ಮಿಸಲು ಸದರಿ ಗುತ್ತಿಗೆದಾರರಿಗೆ ಕರಾರಿನಲ್ಲಿ ತಿಳಿಸಿಲ್ಲವೇ ಅಥವಾ ಇದಕ್ಕಾಗಿ ಅನುದಾನದ ಕೊರತೆ ಏನಾದರೂ ಇದೆಯೇ ;

(ಈ) ಸುಂದರವಾದ ರಸ್ತೆಗಳು ಸದರಿ ಯು.ಜಿ.ಡಿ. ಕಾಮಗಾರಿಯಿಂದಾಗಿ ಹಾಳಾಗುತ್ತಿದ್ದರೂ ನಗರಸಭೆ ಯಾವ ಕ್ರಮ ಕೈಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸದರಿ ರಸ್ತೆಗಳ ಪುನರ್ ನವೀಕರಣಕ್ಕಾಗಿ ಕೈಗೊಳ್ಳುವ ಕ್ರಮಗಳೇನು ?

## ಉತ್ತರ ಕರ್ನಾಟಕದಲ್ಲಿ ಕೃಷಿ ವಿದ್ಯಾಲಯಗಳನ್ನು ಸ್ಥಾಪಿಸುವ ಕುರಿತು

ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೧೩೩೯ (೧೬೦೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕರ್ನಾಟಕದಲ್ಲಿ ಹೊಸ ಕೃಷಿ ವಿದ್ಯಾಲಯಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಒಂದು ಕೃಷಿ ವಿದ್ಯಾಲಯ ಪ್ರಾರಂಭಿಸಬೇಕಾದರೆ ಕನಿಷ್ಠ ಎಷ್ಟು ಎಕರೆ ಜಮೀನು ಬೇಕಾಗುವುದು ; ಮತ್ತು ಸರ್ಕಾರ ಒಂದು ವಿದ್ಯಾಲಯಕ್ಕೆ ಭರಿಸಬೇಕಾದ ಹಣಕಾಸಿನ ಕನಿಷ್ಠ ಮೊತ್ತವೆಷ್ಟು ?

## ರಾಯಚೂರು-ನಿಪ್ಪಾಣಿ ರಾಜ್ಯ ಹೆದ್ದಾರಿ ಅಭಿವೃದ್ಧಿ

ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೧೩೪೦ (೧೬೦೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ನಿಪ್ಪಾಣಿ ರಾಜ್ಯದ ಹೆದ್ದಾರಿಯ ಬಾಗಲಕೋಟೆ ಜಿಲ್ಲೆ, ಮುಧೋಳ ಪಟ್ಟಣದಿಂದ ಮಹಾಲಿಂಗಪೂರ ಮಾರ್ಗವಾಗಿ ಬೆಳಗಾವಿ ಜಿಲ್ಲೆ ನಿಪ್ಪಾಣಿವರೆಗಿನ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಈ ಕಾಮಗಾರಿಗೆ ತಗುಲುವ ವೆಚ್ಚ ಎಷ್ಟು ;

(ಆ) ಎಷ್ಟು ಮೊತ್ತಕ್ಕೆ ಗುತ್ತಿಗೆ ನೀಡಲಾಗಿದೆ ; ಯಾವ ಕಂಪನಿಗೆ ಗುತ್ತಿಗೆ ನೀಡಲಾಗಿದೆ ;

(ಇ) ಕೆಲಸ ಪೂರ್ಣಗೊಳಿಸಲು ನಿಗದಿಪಡಿಸಿರುವ ಸಮಯವೆಷ್ಟು ;

(ಈ) ಈ ಕಾಮಗಾರಿಯನ್ನು ಯಾವ ಯೋಜನೆಯಲ್ಲಿ ತೆಗೆದುಕೊಳ್ಳಲಾಗಿದೆ ? (ವಿವರ ನೀಡುವುದು)

## ಕಾಗವಾಡ-ಕಲಾದಗಿ ರಾಜ್ಯ ಹೆದ್ದಾರಿ-೫೩ ಅಭಿವೃದ್ಧಿ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೪೧ (೧೬೦೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾಗವಾಡ-ಕಲಾದಗಿ ರಾಜ್ಯ ಹೆದ್ದಾರಿ-೫೩ರಲ್ಲಿ ಬಾಗಲಕೋಟೆ ಜಿಲ್ಲೆ, ಜಮಖಂಡಿ ನಗರದಿಂದ ರಬಕವಿ-ಬನಹಟ್ಟಿ ಮತ್ತು ತೇರದಾಳ ಪಟ್ಟಣಗಳ ಮೂಲಕವಾಗಿ ಬೆಳಗಾವಿ ಜಿಲ್ಲೆಯ ಕಾಗವಾಡದವರೆಗಿನ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಕಾಮಗಾರಿಯನ್ನು ಯಾವ ಯೋಜನೆಯಡಿಯಲ್ಲಿ ಕೈಗೆತ್ತಿಕೊಳ್ಳಲಾಗುವುದು ; ಅದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ; ಈ ಕಾರ್ಯವನ್ನು ಪ್ರಾರಂಭಿಸಲಾಗುವುದು ಯಾವಾಗ ?

## ಕೃಷಿ ಡಿಪ್ಲೊಮಾ ಕಾಲೇಜುಗಳಿಗೆ ಮೂಲಭೂತ ಸೌಕರ್ಯ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೪೨ (೧೬೦೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಕೃಷಿ ಡಿಪ್ಲೊಮಾ ಕಾಲೇಜುಗಳನ್ನು ಸ್ಥಾಪಿಸಲಾಗಿದೆ ;

(ಆ) ಪ್ರಾರಂಭಿಸಲಾಗಿರುವ ಕೃಷಿ ಡಿಪ್ಲೊಮಾ ಕಾಲೇಜುಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಸ್ವಂತ ನಿವೇಶನ ಹೊಂದಿರುವ ಕೃಷಿ ಡಿಪ್ಲೊಮಾ ಕಾಲೇಜುಗಳಿಗೆ ಕಾಲೇಜು ಕಟ್ಟಡ, ವಿದ್ಯಾರ್ಥಿಗಳ ವಸತಿ ನಿಲಯದ ಕಟ್ಟಡ ಹಾಗೂ ಸಿಬ್ಬಂದಿಗಳ ವಸತಿ ಸಮುಚ್ಚಯಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಟ್ಟಣ ಸಹಕಾರಿ ಬ್ಯಾಂಕುಗಳಿಗೆ ಆದಾಯ ತೆರಿಗೆ ವಿಧಿಸುತ್ತಿರುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೪೩ (೧೬೦೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಟ್ಟಣ ಸಹಕಾರಿ ಬ್ಯಾಂಕುಗಳ (ಅರ್ಬನ್ ಬ್ಯಾಂಕ್‌ಗಳ) ಲಾಭಾಂಶದ ಮೇಲೆ ಆದಾಯ ತೆರಿಗೆಯನ್ನು ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಲಾಭಾಂಶದ ಮೇಲೆ ತೆರಿಗೆ ವಿಧಿಸುತ್ತಿರುವುದರಿಂದ ಸದರಿ ಬ್ಯಾಂಕುಗಳ ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದು, ಇದನ್ನು ನಿವಾರಿಸಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ?

## ರೈತರ ಆತ್ಮಹತ್ಯೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪೪ (೧೬೬೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ರೈತರು ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳೆಷ್ಟು ; ಆತ್ಮಹತ್ಯೆ ಮಾಡಿಕೊಳ್ಳಲು ಕಾರಣಗಳೇನು ; (ವರ್ಷಾವಾರು, ಜಿಲ್ಲಾವಾರು, ಪ್ರಕರಣವಾರು ಮಾಹಿತಿ ನೀಡುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ರೈತರ ಪ್ರತಿ ಕುಟುಂಬಕ್ಕೆ ನೀಡಲಾದ ಪರಿಹಾರವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರೈತರ ಆತ್ಮಹತ್ಯೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ನಗರಕ್ಕೆ ಅವಶ್ಯವಿರುವ ವಿದ್ಯುತ್ ಪ್ರಮಾಣ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪೫ (೧೬೧೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಉತ್ಪಾದಿಸಲಾಗುತ್ತಿರುವ ವಿದ್ಯುತ್ತಿನ ಪ್ರಮಾಣವೆಷ್ಟು ; ಯಾವ ಯಾವ ಮೂಲಗಳಿಂದ ಉತ್ಪಾದಿಸಲಾಗುತ್ತಿದೆ, ಬೆಂಗಳೂರು ನಗರಕ್ಕೆ ಅವಶ್ಯವಿರುವ ವಿದ್ಯುತ್ ಪ್ರಮಾಣವೆಷ್ಟು ; (ಹಂಚಿಕೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೇಸಿಗೆಯಲ್ಲಿ ವಿದ್ಯುತ್ ಸಮಸ್ಯೆ ತಲೆದೋರದಂತೆ ಎಚ್ಚರವಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು) ?

## ಫುಟ್‌ಪಾತ್‌ನಲ್ಲಿ ಟ್ರಾನ್ಸ್‌ಫಾರ್ಮರ್‌ಗಳನ್ನು ನಿರ್ಮಿಸಿರುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪೬ (೧೬೧೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಫುಟ್‌ಪಾತ್‌ಗಳಲ್ಲಿ ಬೆಸ್ಕಾಂರವರು ಟ್ರಾನ್ಸ್‌ಫಾರ್ಮರ್‌ಗಳನ್ನು ನಿರ್ಮಿಸಿರುವುದರಿಂದ ಪಾದಚಾರಿಗಳು ಹಾಗೂ ವಾಹನ ಸವಾರರಿಗೆ ತೊಂದರೆ ತಡೆಗಟ್ಟಲು ಸರ್ಕಾರ ರೂಪಿಸಿರುವ ಮಾರ್ಗೋಪಾಯಗಳೇನು ;

(ಆ) ಬೆಸ್ಕಾಂ ಜಿ.ಓ.ಎಸ್. ವ್ಯವಸ್ಥೆಯನ್ನು ಜಾರಿಗೊಳಿಸುತ್ತಿರುವುದು ನಿಜವೇ ; ಇದರಿಂದಾಗುವ ಅನುಕೂಲಗಳೇನು ? (ವಿವರಗಳನ್ನು ನೀಡುವುದು

## ಗದಗ–ಬೆಟಗೇರಿಯ ರಿಂಗ್‌ರೋಡ್ ಅಭಿವೃದ್ಧಿ ಯೋಜನೆ

**ಶ್ರೀ ಎಸ್.ವ್ಹಿ. ಸಂಕನೂರು (ಪದವೀಧರರ ಕ್ಷೇತ್ರ) :-**

೧೩೪೭ (೧೬೧೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗದಗ–ಬೆಟಗೇರಿ ರಿಂಗ್‌ರೋಡ್ ಯೋಜನೆ ಅಭಿವೃದ್ಧಿ ಪಡಿಸುವ ಕಾರ್ಯಕ್ಕೆ ಮಂಜೂರಾದ ರಸ್ತೆಯ ಉದ್ದ ಮತ್ತು ಅದರ ಯೋಜನಾ ವೆಚ್ಚವೆಷ್ಟು ;

(ಆ) ಈ ಯೋಜನೆಯಡಿ ಸದ್ಯ ಎಷ್ಟು ಕಿ.ಮೀ. ರಿಂಗ್‌ರೋಡ್ ರಸ್ತೆ ಅಭಿವೃದ್ಧಿಯಾಗಿದೆ ;

(ಇ) ಈ ಯೋಜನೆ ಪೂರ್ಣಗೊಳಿಸುವಲ್ಲಿ ರಿಂಗ್‌ರೋಡ್‌ನ ಕೆಲವು ಭಾಗದಲ್ಲಿ ಅಕ್ರಮ ಮನೆಗಳನ್ನು ನಿರ್ಮಿಸಲಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯ ಪರಿಹಾರಕ್ಕೆ ಕೈಗೊಂಡ ಕ್ರಮಗಳೇನು ;

(ಈ) ಈ ಯೋಜನೆ ಪೂರ್ಣಗೊಳಿಸಲು ಬೇಕಾಗುವ ಕಾಲಾವಧಿ ಹಾಗೂ ಅನುದಾನ ಎಷ್ಟು ? (ವಿವರ ನೀಡುವುದು)

## ರೈತರಿಗಾಗಿ ಇರುವ ಸೋಲಾರ್ ಯೋಜನೆ

**ಶ್ರೀ ಎಸ್.ವ್ಹಿ. ಸಂಕನೂರು (ಪದವೀಧರರ ಕ್ಷೇತ್ರ) :-**

೧೩೪೮ (೧೬೧೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರಿಗಾಗಿ ಇರುವ ಸೋಲಾರ್ ಪಂಪ್‌ಸೆಟ್ ಯೋಜನೆಯನ್ನು ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗಿದೆ ;

(ಆ) ೨೦೧೪-೧೫ರಲ್ಲಿ ಈ ಯೋಜನೆಯನ್ನು ಇನ್ನು ಎಷ್ಟು ಜಿಲ್ಲೆಗಳಿಗೆ ವಿಸ್ತರಿಸಲಾಗುವುದು ? (ವಿವರಣೆ ನೀಡುವುದು)

## ಕೆ.ಪಿ.ಟಿ.ಸಿ.ಎಲ್.ನಿಂದ ಎಕ್ಸ್‌ಪ್ರೆಸ್ ಲೈನ್

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪೯ (೧೬೧೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ ತುಂಗಭದ್ರಾ ನದಿ ದಂಡೆಯ ಹಾಗೂ ಕೃಷ್ಣಾ ನದಿ ದಂಡೆಯ ರೈತರ ಪಂಪ್‌ಸೆಟ್‌ಗಳಿಗೆ ಬೇಕಾದ ವಿದ್ಯುತ್ ಬೇಡಿಕೆಯನ್ನು ಪೂರೈಸಲು ಕೆ.ಪಿ.ಟಿ.ಸಿ.ಎಲ್.ನಿಂದ ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಯಚೂರು ಜಿಲ್ಲೆಯ ತುಂಗಭದ್ರಾ ನದಿ ದಂಡೆಯ ಹಾಗೂ ಕೃಷ್ಣಾ ನದಿ ದಂಡೆಯ ರೈತರ ಪಂಪ್‌ಸೆಟ್‌ಗಳಿಗೆ ಬೇಕಾದ ವಿದ್ಯುತ್ ಬೇಡಿಕೆಯನ್ನು ಪೂರೈಸಲು ಕೆ.ಪಿ.ಟಿ.ಸಿ.ಎಲ್.ನಿಂದ ಎಕ್ಸ್‌ಪ್ರೆಸ್ ಲೈನ್ ಹಾಕುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ರೈತರ ಬೇಡಿಕೆಗಳನ್ನು ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಎಕ್ಸ್‌ಪ್ರೆಸ್ ಲೈನ್‌ಗಳನ್ನು ಹಾಕಿ ರೈತರಿಗೆ ಬೇಡಿಕೆಗಳನುಸಾರ ವಿದ್ಯುತ್ ಪೂರೈಸಲು ಯಾವಾಗ ಕ್ರಮ ಕೈಗೊಳ್ಳುವಿರಿ ? (ವಿವರ ಒದಗಿಸುವುದು)

# ವಿದ್ಯುತ್ ಕೇಂದ್ರಗಳ ಬೇಡಿಕೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೫೦ (೧೬೧೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಕೆ.ಪಿ.ಟಿ.ಸಿ.ಎಲ್. ೨೨೦ ಸಬ್ ಸ್ಟೇಷನ್‌ಗಳಲ್ಲಿನ ವಿದ್ಯುತ್ ಬೇಡಿಕೆ ಎಷ್ಟು ; ಸರಬರಾಜು ಮಾಡುತ್ತಿರುವ ವಿದ್ಯುತ್ ಎಷ್ಟು ; ಬೇಡಿಕೆಗೆ ಅನುಸಾರವಾಗಿ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಪೂರ್ಣ ವಿವರ ಒದಗಿಸುವುದು)

(ಆ) ರಾಯಚೂರು ಜಿಲ್ಲೆಯಲ್ಲಿ ಇರುವ ೨೨೦ ಮೆ.ವ್ಯಾ. ಮತ್ತು ೧೧೦ ಮೆ.ವ್ಯಾ. ವಿದ್ಯುತ್ ಸ್ಥಾವರಗಳಲ್ಲಿ ವಿದ್ಯುತ್ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಬೇಡಿಕೆಗೆ ಅನುಸಾರವಾಗಿ ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ೨೨೦/೧೧ ಕಿ.ವ್ಯಾ., ೧೧೦/೧೧ ಕಿ.ವ್ಯಾ., ೩೩/೧೧ ಕಿ.ವ್ಯಾ., ಸಬ್ ಸ್ಟೇಷನ್‌ಗಳನ್ನು ೨೦೧೫-೧೬ನೇ ಸಾಲಿನಲ್ಲಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ವಿದ್ಯುತ್ ಸಮಸ್ಯೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಸಹಕಾರ ಸಂಘಗಳ ಚುನಾವಣೆಯ ಮೀಸಲಾತಿ

ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-

೧೩೫೧ (೧೬೨೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನಲ್ಲಿ ವಿವಿಧ ಸಹಕಾರಿ ಸಂಸ್ಥೆಗಳ (ಸಂಘಗಳು ಮತ್ತು ಬ್ಯಾಂಕುಗಳು ಸೇರಿದಂತೆ) ಆಡಳಿತ ಮಂಡಳಿಗೆ ಚುನಾವಣೆ ನಡೆದಿರುವುದು ನಿಜವಲ್ಲವೇ ; ಚುನಾವಣೆ ನಡೆದಿರುವ ಒಟ್ಟು ಸಂಸ್ಥೆಗಳ ಸಂಖ್ಯೆ ಎಷ್ಟು ;

(ಆ) ಚುನಾವಣೆ ನಡೆದಿರುವ ಸಹಕಾರ ಸಂಸ್ಥೆಗಳಲ್ಲಿ ಮೀಸಲಾತಿ ಪ್ರವರ್ಗ-೨ಎ-ಗೆ ಚುನಾಯಿತರಾಗಿರುವ ಸಂಖ್ಯೆ ಎಷ್ಟು ; ಪ್ರವರ್ಗ ೩ಬಿ-ಗೆ ಚುನಾಯಿತರಾಗಿರುವ ಸಂಖ್ಯೆ ಎಷ್ಟು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ ಚುನಾಯಿತರಾಗಿರುವವರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಇಂಜಿನಿಯರ್‌ಗಳ ಎರವಲು ಸೇವೆ

ಶ್ರೀ ಬಿ.ಜೆ.ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):-

೧೩೫೨ (೧೬೨೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಲೋಕೋಪಯೋಗಿ ಇಲಾಖೆಯಿಂದ ವಿವಿಧ ಶ್ರೇಣಿಯ ಇಂಜಿನಿಯರ್‌ಗಳನ್ನು ಮಹಾನಗರ ಪಾಲಿಕೆಗಳು, ಪುರಸಭೆಗಳು, ಸಿಎಂಸಿ ಮತ್ತು ಅಭಿವೃದ್ಧಿ ಪ್ರಾಧಿಕಾರಿಗಳು ಈ ಸಂಸ್ಥೆಗಳಿಗೆ ಎರವಲು ಸೇವೆ (Foreign Services) ನೀಡುತ್ತಿರುವುದು ನಿಜವೇ ; ಎರವಲು ಸೇವೆಯ ನಿಯಮಗಳೇನು ;

(ಆ) ಎರವಲು ಸೇವೆ ನೀಡಿರುವ ಎಲ್ಲಾ ಶ್ರೇಣಿ ಇಂಜಿನಿಯರ್‌ಗಳ ವಿವರ ನೀಡುವುದು ಅಧಿಕಾರಿಯೊಬ್ಬರು, ಅವರ ಒಟ್ಟು ಸೇವೆಯಲ್ಲಿ ಎಷ್ಟು ವರ್ಷ ಎರವಲು ಸೇವೆಯಲ್ಲಿರಬಹುದು ; ಎರವಲು ಸೇವೆಯಲ್ಲಿ ಕೆಲಸ ಮಾಡಿದ ಸಂಸ್ಥೆಗಳ ಹೆಸರು ಮತ್ತು ಒಂದೇ ಸಂಸ್ಥೆಯಲ್ಲಿ ಹೆಚ್ಚಿಗೆ ಎಷ್ಟು ವರ್ಷ ಕೆಲಸ ಮಾಡಿದ್ದಾರೆ ? (ವಿವರ ಒದಗಿಸುವುದು)

## ಕಬ್ಬು ಸರಬರಾಜು ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೩೫೩ (೧೬೨೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಹಾಗೂ ಸಹಕಾರಿ ಸಂಘ-ಸಂಸ್ಥೆಗಳ ಆಡಳಿತ ವ್ಯಾಪ್ತಿಯಲ್ಲಿ ಬರುವ ಸಕ್ಕರೆ ಕಂಪನಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಕಾರ್ಖಾನೆಗಳಿಗೆ ಕಳೆದ ಸಾಲಿನಲ್ಲಿ ರೈತರಿಂದ ಎಷ್ಟು ಪ್ರಮಾಣದ ಕಬ್ಬು ಸರಬರಾಜು ಆಗಿದೆ ; (ಕಂಪನಿವಾರು ಎಷ್ಟು ಟನ್ ಸರಬರಾಜು ಮಾಡಲಾಗಿದೆ ಎಂಬ ಮಾಹಿತಿ ನೀಡುವುದು)

(ಇ) ಕಳೆದ ಸಾಲಿನಲ್ಲಿ ಪ್ರತಿ ಟನ್ ಕಬ್ಬಿಗೆ ಸರ್ಕಾರ ನಿಗಧಿಪಡಿಸಿದ ದರವೆಷ್ಟು ;

(ಈ) ಇದುವರೆವಿಗೆ ಸರ್ಕಾರ ನಿಗಧಿಪಡಿಸಿರುವ ಮೊತ್ತವನ್ನು ಕಬ್ಬು ಸರಬರಾಜು ಮಾಡಿರುವ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಪಾವತಿ ಮಾಡಿರುವ ಕಾರ್ಖಾನೆಗಳು ಯಾವುವು ; (ವಿವರಗಳೊಡನೆ)

(ಉ) ಇದುವರೆವಿಗೆ ಸದರಿ ಮೊತ್ತವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿ ಮಾಡದೆ ಇರುವ ಕಾರ್ಖಾನೆಗಳು ಯಾವುವು ;

(ಊ) ಪಾವತಿ ಮಾಡಬೇಕಾಗಿರುವ ಬಾಕಿ ಮೊತ್ತವೆಷ್ಟು ; (ಕಂಪನಿವಾರು ವಿವರಗಳೊಡನೆ)

(ಋ) ಕಬ್ಬು ಸರಬರಾಜುದಾರರಿಗೆ ಬಾಕಿ ಮೊತ್ತವನ್ನು ಪಾವತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ಮತ್ತು ಬಾಕಿ ಮೊತ್ತವನ್ನು ಯಾವ ಕಾಲಮಿತಿಯೊಳಗೆ ಪಾವತಿ ಮಾಡಲಾಗುವುದು ?

## ರೈತರಿಗೆ ಬೆಳೆ ವಿಮೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೩೫೪ (೧೬೨೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೨-೧೩ ಮತ್ತು ೨೦೧೩-೧೪ನೇ ಸಾಲಿನಲ್ಲಿ ಬೆಳೆ ವಿಮೆಯನ್ನು ನೋಂದಾಯಿಸಿಕೊಂಡಿರುವ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ರೈತರು ಯಾವ ಯಾವ ಬೆಳೆಗೆ ವಿಮೆ ನೋಂದಾಯಿಸಿರುತ್ತಾರೆ ಮತ್ತು ಎಷ್ಟು ವಿಸ್ತೀರ್ಣದ ಭೂಮಿಯಲ್ಲಿ ಬೆಳೆ ವಿಮೆ ನೋಂದಾಯಿಸಿರುತ್ತಾರೆ ; (ವಿವರ ನೀಡುವುದು)

(ಇ) ಇದುವರೆವಿಗೂ ಬೆಳೆ ವಿಮೆ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಎಷ್ಟು ಮೊತ್ತವನ್ನು ಪಾವತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಇದುವರೆವಿಗೂ ಬೆಳೆ ವಿಮೆ ಪ್ರಯೋಜನ ಪಡೆದ ಫಲಾನುಭವಿಗಳಿಗೆ ಪಾವತಿ ಮಾಡಬೇಕಾಗಿರುವ ಬಾಕಿ ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ನಗರೋತ್ಥಾನ ಯೋಜನೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೩೫೫ (೧೬೨೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರೋತ್ಥಾನ ಯೋಜನೆ ಎಂದಿನಿಂದ ಜಾರಿಗೆ ಬಂದಿರುತ್ತದೆ ;

(ಆ) ಈ ಯೊಜನೆಯಡಿ ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯ ವಿವಿಧ ಪಟ್ಟಣ ಪಂಚಾಯಿತಿ, ನಗರಸಭೆ, ಪುರಸಭೆಗಳಿಗೆ ನೀಡಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಸದರಿ ಅವಧಿಯಲ್ಲಿ ಬಿಡುಗಡೆಗೊಳಿಸಲಾದ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ವಿನಿಯೋಗಿಸಲಾಗಿದೆಯೇ ;

(ಈ) ಈ ಯೋಜನೆಗೆ ಸಂಬಂಧಿಸಿದಂತೆ ನಡೆದಿರುವ ಅವ್ಯವಹಾರ ಪ್ರಕರಣಗಳ ಸಂಖ್ಯೆ ಎಷ್ಟಿವೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೃಷಿ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಕೆ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೩೫೬ (೧೬೨೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ರೈತರ ಕೃಷಿ ಚಟುವಟಿಕೆಗಳ ಪಂಪ್‌ಸೆಟ್‌ಗಳಿಗೆ ಇಂಧನ ಇಲಾಖೆಯಿಂದ ಸರಬರಾಜು ಮಾಡುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ವಾರ್ಷಿಕವಾಗಿ ಇದರಿಂದಾಗಿ ತಗಲುವ ವೆಚ್ಚವೆಷ್ಟು ;

(ಇ) ಈ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಪ್ರಸ್ತಾವ ಸರ್ಕಾರದ ಪರಿಶೀಲನೆಯಲ್ಲಿದೆಯೇ ;

(ಈ) ಇದ್ದಲ್ಲಿ ಇದರಿಂದ ರೈತರ ಮೇಲಾಗುವ ಪರಿಣಾಮಗಳೇನು ?

## ಮಾವಿನ ಬೆಳೆ ನಷ್ಟ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೩೫೭ (೧೬೨೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ-ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಮಾವಿನ ಬೆಳೆಯ ವಿಸ್ತೀರ್ಣ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಬಂದಿರುವ ಇಳುವರಿ ಎಷ್ಟು ;

(ಆ) ಈ ಭಾಗದಲ್ಲಿನ ಮಾವಿನ ಮರಗಳು ಇತ್ತೀಚೆಗೆ ಒಣಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಇದರ ವಿಸ್ತೀರ್ಣ ಹಾಗೂ ಅಂದಾಜಿಸಲಾದ ನಷ್ಟದ ಪ್ರಮಾಣ ಎಷ್ಟು ;

(ಈ) ಈ ಸಂಬಂಧ ಸಮೀಕ್ಷೆ ನಡೆಸಲಾಗಿದೆಯೇ ; ನಡೆಸಿದ್ದರೆ, ವಿವರಗಳನ್ನು ನೀಡುವುದು ;

(ಉ) ಈ ನಷ್ಟ ಭರಿಸಿ ರೈತರ ನೆರವಿಗೆ ವಿಶೇಷವಾದ ಪ್ಯಾಕೇಜ್ ಘೋಷಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಟೋಲ್ ವಸೂಲಾತಿ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೩೫೮(೧೬೩೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು-ತುಮಕೂರು ರಸ್ತೆಯಲ್ಲಿ ಸರ್ವೀಸ್ ರಸ್ತೆ ನಿರ್ಮಿಸದೇ ಜಾಸ್ ಟೋಲ್ ಕಂಪನಿಯುವರು ಟೋಲ್ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ ಇದು ಗುತ್ತಿಗೆ ನಿಯಮಗಳ ಉಲ್ಲಂಘನೆ ಅಲ್ಲವೇ ;

(ಇ) ಇದೂವರೆಗೂ ಸರ್ವಿಸ್ ರೋಡ್ ನಿರ್ಮಿಸದೇ ಇರಲು ಕಾರಣಗಳೇನು ; ಹಾಗೂ ಈ ಸರ್ವೀಸ್ ರೋಡ್ ನಿರ್ಮಿಸುವ ವರೆಗೂ ಟೋಲ್ ಸಂಗ್ರಹ ತಡೆಯುಲು ಇರುವ ತೊಂದರೆಗಳೇನು ?

## ಪ್ಲಾಸ್ಟಿಕ್ ನಿಷೇಧ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೩೪೫(೧೬೩೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಪುರಸಭೆಗಳಲ್ಲಿ ಪ್ಲಾಸ್ಟಿಕ್ ಮುಕ್ತ ಪುರಸಭೆಗಳಾವುವು ;

(ಆ) ಎಲ್ಲಾ ಪುರಸಭೆಗಳನ್ನು ಪ್ಲಾಸ್ಟಿಕ್ ಮುಕ್ತ ಪುರಸಭೆಗಳನ್ನಾಗಿ ಮಾಡಲು ಇರುವ ತೊಂದರೆಗಳೇನು ;

(ಇ) ಪ್ಲಾಸ್ಟಿಕ್ ನಿಷೇಧವನ್ನು ಕಡ್ಡಾಯವಾಗಿ ಹಾಗೂ ಧನಾತ್ಮಕವಾಗಿ ಕಾರ್ಯರೂಪಕ್ಕೆ ತಂದಿರುವ ಪುರಸಭೆಗಳಿಗೆ ಸರ್ಕಾರ ನೀಡುವ ಉತ್ತೇಜನಗಳಾವುವು ?

## ಅಲ್ಪಸಂಖ್ಯಾಂತರ ವಿದ್ಯಾರ್ಥಿ ವೇತನ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೩೬೦(೧೬೨೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಮಕ್ಕಳಿಗೆ ೧ನೇ ತರಗತಿಯಿಂದ ಪದವಿವರೆಗೂ ವಿವಿಧ ಹಂತಗಳಲ್ಲಿ ನೀಡುವ ವಿದ್ಯಾರ್ಥಿ ವೇತನ ಎಷ್ಟು ;

(ಆ) ಇದರಲ್ಲಿ ರಾಜ್ಯದ ಪಾಲು ಹಾಗೂ ಕೇಂದ್ರದ ಪಾಲು ಎಷ್ಟು ;

(ಇ) ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ವಿದ್ಯಾರ್ಥಿಗೆ ಸರ್ಕಾರ ಭರಿಸುವ ಮೊತ್ತವೆಷ್ಟು ?

## "ಶಾಖೋತ್ಪನ್ನ ವಿದ್ಯುತ್ ಸ್ಥಾವರ" ವಿಳಂಬ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೩೬೧ (೧೬೩೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ತಾಲ್ಲೂಕಿನ ನಂದಿಶಿನ್ನೂರ, ಫೀರೋಜಾಬಾದ್ ಹಾಗೂ ಕಿರಣಗಿ ಗ್ರಾಮಗಳ ವ್ಯಾಪ್ತಿಯಲ್ಲಿ ಉದ್ದೇಶಿತ "ಶಾಖೋತ್ಪನ್ನ ವಿದ್ಯುತ್ ಸ್ಥಾವರ" ಯೋಜನೆಯನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇಲ್ಲವಾದಲ್ಲಿ, ಸದರಿ ಗ್ರಾಮಗಳಲ್ಲಿನ ಫಲವತ್ತಾದ ರೈತರ ಸಾವಿರಾರು ಎಕರೆ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡು ಐದು ವರ್ಷ ಗತಿಸಿದರೂ ಉದ್ದೇಶಿತ ಯೋಜನೆಯ ಯಾವುದೇ ಚಟುವಟಿಕೆಗಳು ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಇದೆಯೇ ; (ಮಾಹಿತಿ ನೀಡುವುದು)

(ಇ) ಸದರಿ ಉದ್ದೇಶಕ್ಕೆ ಭೂಸ್ವಾಧೀನ ಪಡಿಸಿಕೊಳ್ಳಲಾದ ಜಮೀನಿನ ಸಂಪೂರ್ಣ ವಿವರ ನೀಡುವುದು (ಗ್ರಾಮವಾರು, ಎಕರೆವಾರು ಹಾಗೂ ಹಂಚಿಕೆಯಾದ/ಹಂಚಿಕೆಯಾಗದ ಪರಿಹಾರ ಧನದ ವಿವರ ನೀಡುವುದು)

(ಈ) ಸದರಿ "ಶಾಖೋತ್ಪನ್ನ ವಿದ್ಯುತ್ ಸ್ಥಾವರ" ಯೋಜನೆಯ ಪೂರ್ಣ ವಿವರವುಳ್ಳ ಸಮಗ್ರ ಮಾಹಿತಿ ನೀಡುವುದು ;

(ಉ) ಸದರಿ ಯೋಜನೆಯ ಅನುಷ್ಠಾನದ ವಿಳಂಬಕ್ಕೆ ಕಾರಣಗಳೇನು ; ಇದನ್ನು ಸರಿಪಡಿಸಿ ಯೋಜನೆಯನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲು ಸರ್ಕಾರದ ಮುಂದಿರುವ ಕ್ರಮವೇನು ?

## ಕಲಬುರಗಿಯ ತಾಜ್ ಸುಲ್ತಾನ ಪೂರದಲ್ಲಿ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಹಂಚಿಕೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೩೬೨ (೧೬೩೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿಯ ತಾಜ್‌ಸುಲ್ತಾನಪೂರ ಹಣ್ಣು ಮತ್ತು ತರಕಾರಿ ಮಾರುಕಟ್ಟೆಯ ಮಳಿಗೆಗಳ ಕಟ್ಟಡಗಳು ಪೂರ್ಣಗೊಂಡು ನಾಲ್ಕು ವರ್ಷ ಗತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಇದ್ದಲ್ಲಿ ಸಮಗ್ರ ವಿವರ ನೀಡುವುದು).

(ಆ) ಸದರಿ ಮಾರುಕಟ್ಟೆಯಲ್ಲಿನ ಮಳಿಗೆಗಳ ಹಂಚಿಕೆ ಹಾಗೂ ಯಾವುದೇ ಉದ್ದೇಶಿತ ಚಟುವಟಿಕೆ ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ವಿಳಂಬಕ್ಕೆ ಕಾರಣಗಳೇನು ;

(ಇ) ಈ ವಿಳಂಬವನ್ನು ಸರಿಪಡಿಸಿ ಸದರಿ ಮಾರುಕಟ್ಟೆಯಲ್ಲಿನ ವ್ಯಾಪಾರ ಮಳಿಗೆಗಳ ಹಂಚಿಕೆ ಮತ್ತು ಉದ್ದೇಶಿತ ವ್ಯಾಪಾರ ಚಟುವಟಿಕೆ ಆರಂಭಿಸುವಲ್ಲಿ ಸರ್ಕಾರವು ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿಯಲ್ಲಿ ತೊಗರಿ "ಟೆಕ್ನಾಲಜಿ ಪಾರ್ಕ್" ಸ್ಥಾಪನೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೩೬೩ (೧೬೩೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿಯಲ್ಲಿ ತೊಗರಿ ಟೆಕ್ನಾಲಜಿ ಪಾರ್ಕ್ ಸ್ಥಾಪಿಸುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಎಷ್ಟು ; ಯೋಜನಾ ವೆಚ್ಚ (ಯೋಜನೆಯ ಉದ್ದೇಶದ ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಜಮೀನು ಎಷ್ಟು ; (ವಿವರ ನೀಡುವುದು)

(ಇ) ಈ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಕಾರ್ಯಾರಂಭ ಮಾಡಲಾಗುವುದು ? (ಮಾಹಿತಿ ನೀಡುವುದು)

## ಕೆ.ಎಂ.ಎಫ್. ಹಾಲಿನ ಘಟಕಗಳ ಗುಣಮಟ್ಟ ಕಾಪಾಡುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೬೪ (೧೬೪೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೆ.ಎಂ.ಎಫ್. ವತಿಯಿಂದ ಸರಬರಾಜು ಮಾಡುತ್ತಿರುವ ಹಾಲು ತನ್ನ ಗುಣಮಟ್ಟವನ್ನು ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಯ ಕೆ.ಎಂ.ಎಫ್. ಘಟಕಗಳಲ್ಲಿ ಈ ರೀತಿಯ ಗುಣಮಟ್ಟದ ಕೊರತೆ ಇದೆ ;

(ಇ) ಬೆಳಗಾವಿ ಮತ್ತಿತರ ಕೆ.ಎಂ.ಎಫ್. ಘಟಕಗಳಲ್ಲಿ ಬಾಯಿಲರ್‌ಗಳಿಂದ ಉತ್ಪತ್ತಿಯಾಗುತ್ತಿರುವ ಹೊಗೆಯಿಂದಾಗಿ ಸುತ್ತಮುತ್ತಲಿನ ಪರಿಸರ ವಾಯು ಮಾಲಿನ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇಂತಹ ಘಟಕಗಳನ್ನು ನಿಯಂತ್ರಣಕ್ಕೆ ತರಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

## ರಾಜ್ಯದಲ್ಲಿರುವ ತೋಟಗಾರಿಕೆ ಫಾರಂಗಳು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೬೫ (೧೬೪೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ತೋಟಗಾರಿಕೆ ಫಾರಂಗಳ ಸಂಖ್ಯೆ ಎಷ್ಟು ; ಅವುಗಳ ವಿಸ್ತೀರ್ಣವೆಷ್ಟು ;

(ಆ) ಸದರಿ ತೋಟಗಾರಿಕೆಯ ಫಾರಂಗಳಿಂದ ಸರ್ಕಾರಕ್ಕೆ ಬರುತ್ತಿರುವ ವಾರ್ಷಿಕ ಆದಾಯವೆಷ್ಟು ;

(ಇ) ಕೋಲಾರ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳಿಗೆ ಪ್ರಸಕ್ತ ಸಾಲಿನಲ್ಲಿ ರಿಯಾಯಿತಿ ದರದಲ್ಲಿ ಒದಗಿಸುವ ಸಸಿಗಳು, ಕ್ರಿಮಿನಾಶಕಗಳು ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸಾವಯವ ಕೃಷಿಗೆ ಬಿಡುಗಡೆಯಾದ ಹಣ ದುರುಪಯೋಗ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೬೬ (೧೬೪೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೨೦೧೪ ಮತ್ತು ೨೦೧೪-೨೦೧೫ನೇ ಸಾಲಿನಲ್ಲಿ ಸಾವಯವ ಕೃಷಿಗಾಗಿ ಬಿಡುಗಡೆ ಮಾಡಿರುವ ಮೊತ್ತ ಎಷ್ಟು ;

(ಆ) ರೈತರಿಗೆ ವಿತರಣೆ ಮಾಡಿರುವ ಮೊತ್ತ ಎಷ್ಟು ;

(ಇ) ಈ ಹಣ ನಿಜವಾದ ರೈತ ಫಲಾನುಭವಿಗಳಿಗೆ ತಲುಪದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದರೆ, ಹಣ ದುರುಪಯೋಗ ಮತ್ತು ದುರ್ಬಳಕೆ ಮಾಡಿರುವವರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಜರುಗಿಸಿದೆ ? (ವಿವರ ನೀಡುವುದು)

## ಮಂಡ್ಯ ಜಿಲ್ಲೆಯ ಗ್ರಾಮಾಂತರ ಸಂಪರ್ಕ ರಸ್ತೆಗಳ ದುರಸ್ತಿ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೬೭ (೧೬೪೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ತುಂಬಾ ಕಳಪೆ ಮಟ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರದ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಸದರಿ ರಸ್ತೆಗಳನ್ನು ದುರಸ್ತಿಗೊಳಿಸಿ ಸಂಚಾರಕ್ಕೆ ಮುಕ್ತ ಮಾಡಲು ಪ್ರಸಕ್ತ ಸಾಲಿನಲ್ಲಿ ಹಣ ಮಂಜೂರು ಮಾಡಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ರಸ್ತೆಗಳ ದುರಸ್ತಿ ಕಾಮಗಾರಿ ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳುತ್ತದೆ ? (ವಿವರ ನೀಡುವುದು)

## ಬೆಂಗಳೂರು–ಮೈಸೂರು ರಾಜ್ಯ ಹೆದ್ದಾರಿಯಲ್ಲಿ ಹಂಪ್ಸ್‌ಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೮ (೧೬೪೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹೆದ್ದಾರಿಗಳಲ್ಲಿ ಮತ್ತು ಇತರ ರಸ್ತೆಗಳಲ್ಲಿ ಹಂಪ್ಸ್‌ಗಳನ್ನು ಹಾಕಲು ಇರುವ ನಿಯಮಗಳೇನು ? ಅವುಗಳನ್ನು ಅಧಿಕಾರಿಗಳು ಪಾಲಿಸುತ್ತಿದ್ದಾರೆಯೇ ? ಬೆಂಗಳೂರು–ಮೈಸೂರು ರಾಜ್ಯ ಹೆದ್ದಾರಿಯಲ್ಲಿ ಹಾಕಿರುವ ಹಂಪ್ಸ್ (ಉಬ್ಬು)ಗಳ ಸಂಖ್ಯೆ ಎಷ್ಟು ; (ಸ್ಥಳವಾರು ಮಾಹಿತಿ ನೀಡುವುದು)

(ಆ) ಅವುಗಳು ವೈಜ್ಞಾನಿಕವಾಗಿ ಇವೆಯೇ ; ಕೆಲವು ಹಂಪ್ಸ್‌ಗಳಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಜೀವ ಹಾನಿ ಉಂಟಾಗಿರುತ್ತವೆ ;

(ಇ) ಹಾಗಿದ್ದಲ್ಲಿ, ಅವೈಜ್ಞಾನಿಕ ಹಂಪ್ಸ್‌ಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಂಡ್ಯ ನಗರ ಬೀಡಿ ಕಾರ್ಮಿಕರ ಕಾಲೋನಿಯ ಅಭಿವೃದ್ಧಿಗಾಗಿ ಹಣ ಬಿಡುಗಡೆ.

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೩೭೯(೧೬೫೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರ ವ್ಯಾಪ್ತಿಯಲ್ಲಿ ಬರುವ ಬೀಡಿ ಕಾರ್ಮಿಕರ ಕಾಲೋನಿಗೆ ಇತರೆ ಮೂಲಭುತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಇದುವರೆವಿಗೂ ಕ್ರಮಕೈಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದಕ್ಕೆ ವಿಶೇಷ ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಮಾಹಿತಿ ನೀಡುವುದು)

## ಕಬ್ಬು ಸರಬರಾಜು ಮಾಡಿರುವ ರೈತರಿಗೆ ಬಾಕಿ ಹಣ ಪಾವತಿ.

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೩೭೦ (೧೬೪೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿರುವ ರೈತರಿಗೆ ಬಾಕಿ ಹಣವನ್ನು ಪಾವತಿ ಮಾಡದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕಬ್ಬಿನ ಬಾಕಿ ಹಣ ಪಾವತಿ ಮಾಡಬೇಕಾಗಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ಕಾರ್ಖಾನೆಗಳಿಂದ ಬಾಕಿ ಹಣ ಪಾವತಿ ಮಾಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಮಂಡ್ಯದ ಮೈಷುಗರ್ ಕಾರ್ಖಾನೆ ಇತ್ತೀಚಿನ ದಿನಗಳಲ್ಲಿ ತುಂಬಾ ಸಂಕಷ್ಟಕ್ಕೀಡಾಗಿದ್ದು, ಪದೇ ಪದೇ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಸದರಿ ಕಾರ್ಖಾನೆಯನ್ನು ಪುನಃ ಶ್ಚೇತನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆಗೆ ಹಣ ಬಿಡುಗಡೆ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೧೩೭೧ (೧೬೪೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆಯಡಿ ರಾಜ್ಯಕ್ಕೆ ಇದುವರೆಗೂ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಇದರಿಂದ ಕೈಗೊಂಡ ಯೋಜನೆಗಳು ಯಾವುವು ;

(ಇ) ಈ ಯೋಜನೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೈಗೊಂಡ ಯೋಜನೆಗಳು ಯಾವುವು ? (ಯೋಜನೆವಾರು ಪ್ರಗತಿ ವಿವರ ನೀಡುವುದು)

## ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ ಬಿಡುಗಡೆಯಾದ ಹಣ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೭೨ (೧೬೪೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಇದುವರೆಗೂ ರಾಜ್ಯಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ; ಯಾವ ಯಾವ ಯೋಜನೆಗೆ

ಅನುದಾನ ಬಿಡುಗಡೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಅನುದಾನದಿಂದ ಅನುಷ್ಠಾನಗೊಂಡ ಕಾಮಗಾರಿ ಅಥವಾ ಯೋಜನೆಗಳ ಸಂಖ್ಯೆ ಎಷ್ಟು ? (ಫಲಾನುಭವಿಗಳ ವಿವರ ನೀಡುವುದು)

## ಕೃಷಿ ಭಾಗ್ಯ ಯೋಜನೆಯಡಿ ರೈತರಿಗೆ ಆಗುತ್ತಿರುವ ಅನುಕೂಲಗಳು

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೭೩ (೧೬೫೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಳೆಯಾಶ್ರಿತ ರೈತ ಸಮುದಾಯದ ಸುಧಾರಿತ ಜೀವನೋಪಾಯವನ್ನು ಉತ್ತಮಪಡಿಸುವ ಉದ್ದೇಶದಿಂದ ಜಾರಿಗೊಳಿಸಿದ ಕೃಷಿ ಭಾಗ್ಯ ಯೋಜನೆಯಡಿ ಅನುಕೂಲತೆಯನ್ನು ಪಡೆದ ಎಷ್ಟು ರೈತರು ಮಳೆ ನೀರನ್ನು ಸಂಗ್ರಹಿಸಲು ಅನುವಾಗಿದೆ ; (ವಿವರ ನೀಡುವುದು)

(ಆ) ಎಷ್ಟು ಹೆಕ್ಟೇರ್ ವಿಸ್ತೀರ್ಣದಲ್ಲಿ ಜಾರಿಗೊಳಿಸಲಾಗಿದೆ ;

(ಇ) ಉದ್ದೇಶಿತ ಕೃಷಿ ಯಂತ್ರೋಪಕರಣಗಳು ರೈತರಿಗೆ ಸಕಾಲದಲ್ಲಿ ಬಾಡಿಗೆಗೆ ದೊರೆಯುವಂತೆ ಕ್ರಮ ಕೈಗೊಳ್ಳಲಾಗಿದೆ ; ಯಾವ ಯಾವ ಸಂಘ ಸಂಸ್ಥೆಗಳ ಮೂಲಕ ಯಾವ ಯಾವ ಯಂತ್ರೋಪಕರಣಗಳು ಯಾವ ಯಾವ ಸ್ಥಳಗಳಲ್ಲಿ ದೊರೆಯುತ್ತಿವೆ? (ಜಿಲ್ಲೆ ಮತ್ತು ತಾಲ್ಲೂಕುವಾರು ವಿವರ ನೀಡುವುದು)

## ರೈತರ ಪಂಪ್‌ಸೆಟ್‌ಗಳು ಹಾಗೂ ಭಾಗ್ಯಜ್ಯೋತಿ ಕುಟೀರ ಜ್ಯೋತಿಗಳಿಗೆ ಉಚಿತ ವಿದ್ಯುತ್ ನೀಡುವ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೭೪ (೧೬೫೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ನೀರಾವರಿ ಪಂಪ್‌ಸೆಟ್‌ಗಳು ಮತ್ತು ಭಾಗ್ಯಜ್ಯೋತಿ/ಕುಟೀರ ಜ್ಯೋತಿ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆಯೇ ; ಇದರ ಅನುಕೂಲತೆಯನ್ನು ಎಷ್ಟು ರೈತರು ಪಡೆದುಕೊಂಡಿದ್ದಾರೆ ;

(ಆ) ೨೦೧೪–೧೫ರಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಪರಿಶಿಷ್ಟ ಜಾತಿ/ಪಂಗಡ, ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ನಿಗಮಗಳು ಅನುಷ್ಠಾನಗೊಳಿಸಿರುವ ಎಲ್ಲಾ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆಯೇ ; ಕಲ್ಪಿಸಿದ್ದಲ್ಲಿ ಬಾಕಿ ಉಳಿದಿರುವ ರೈತರ ಫಲಾನುಭವಿಗಳ ಸಂಖ್ಯೆ ಎಷ್ಟು ?

## ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ ರಸ್ತೆಗಳ ಅಭಿವೃದ್ಧಿ

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೭೫ (೧೬೫೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ರಲ್ಲಿ ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿಗೊಳಿಸಲು ಅತೀ ಹಿಂದುಳಿದ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟು ಎಷ್ಟು ಕಿ.ಮೀ. ರಸ್ತೆಗಳನ್ನು ನಿರ್ಮಿಸಲಾಗಿದೆ ; ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ; (ತಾಲ್ಲೂಕುವಾರು/ಕಿ.ಮೀ.ವಾರು ವಿವರ ನೀಡುವುದು)

(ಆ) ಅತಿವೃಷ್ಟಿಯಿಂದ ಹಾನಿಗೊಳಗಾದ ರಸ್ತೆ ಮತ್ತು ಸೇತುವೆಗಳ ದುರಸ್ಥಿ ಕಾರ್ಯವನ್ನು ಯಾವ ಯಾವ ಜಿಲ್ಲೆಗಳಲ್ಲಿ ಮಾಡಲಾಗಿದೆ ; ಈ ದುರಸ್ಥಿ ಕಾರ್ಯಕ್ಕೆ ಖರ್ಚಾಗಿರುವ ಹಣ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯ ಸರ್ಕಾರವು ಛತ್ತೀಸ್‌ಗಡ ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೭೬ (೧೬೫೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಛತ್ತೀಸ್‌ಗಡ ರಾಜ್ಯದೊಂದಿಗೆ ವಿದ್ಯುತ್ ಉತ್ಪಾದನೆಗೆ ಒಪ್ಪಂದ ಮಾಡಿಕೊಂಡಿದ್ದು ಯಾವಾಗ ಈ ಒಪ್ಪಂದದ ಎಷ್ಟು ಹಣ ಹೂಡಿಕೆ ಬಗ್ಗೆ ಒಳಗೊಂಡಿರುತ್ತದೆ ;

(ಆ) ಈ ಒಪ್ಪಂದದ ಪ್ರಕಾರ ವಿದ್ಯುತ್‌ನ್ನು ಯಾವಾಗ ಉತ್ಪಾದಿಸಲಾಗುವುದು ;

(ಇ) ಉತ್ಪಾದಿಸಿದ ವಿದ್ಯುತ್‌ನಲ್ಲಿ ಛತ್ತೀಸ್‌ಗಡ ಸರ್ಕಾರದ ಪಾಲೆಷ್ಟು ; ನಮ್ಮ ಪಾಲೆಷ್ಟು ?

## ರಾಜ್ಯದ ನಗರಗಳಲ್ಲಿ ಮಲ ತೆಗೆಯುವ ಮತ್ತು ಮಲದ ಗುಂಡಿಗಳನ್ನು ಸ್ವಚ್ಛಗೊಳಿಸುವುದು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೭ (೧೬೬೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ನಗರಗಳನ್ನು (ಪಟ್ಟಣಗಳಲ್ಲಿ) ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮಲ ತೆಗೆಯುವ ಮತ್ತು

ಮಲದ ಗುಂಡಿಗಳನ್ನು ಸ್ವಚ್ಛಗೊಳಿಸುವ ಕ್ರಿಯೆ ಇನ್ನೂ ಆಚರಣೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ ಯಾವ ನಗರ ಸಭೆ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಈ ಆಚರಣೆ ಇನ್ನೂ ಜೀವಂತವಾಗಿದೆ ; ಎಷ್ಟು ನೌಕರರು ಈ ವೃತ್ತಿಯಲ್ಲಿ ತೊಡಗಿದ್ದಾರೆ ;

(ಇ) ಚರಂಡಿ ತೊಳೆಯುವ ಮತ್ತು ಕಸ ಎತ್ತುವ ಈ ಪೌರ ಕಾರ್ಮಿಕರಿಗೆ ನೀಡಿರುವ ಸ್ವಚ್ಛತಾ ಉಪಕರಣಗಳೆಷ್ಟು ; ಯಾವ ಯಾವ ಸ್ವಚ್ಛತಾ ಉಪಕರಣಗಳನ್ನು ನೀಡಲಾಗಿದೆ ; ವಾರ್ಷಿಕ ಎಷ್ಟು ಸಂಖ್ಯೆಯಲ್ಲಿ ನೀಡಲಾಗಿದೆ ?

## ಸಹಕಾರ ಇಲಾಖೆಯ ಸಹಕಾರ ಸಂಘಗಳ ಚುನಾವಣೆಯಲ್ಲಿ ಎಸ್.ಸಿ./ಎಸ್.ಟಿ.ರವರ ಮೀಸಲಾತಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೭೮ (೧೬೫೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯಲ್ಲಿ ಸಹಕಾರ ಸಂಘಗಳಿಗೆ ರಾಜ್ಯವ್ಯಾಪ್ತಿ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ನೀಡಲಾಗಿದೆಯೇ ;

(ಆ) ರಾಜ್ಯದ ಎಲ್ಲಾ ಸಹಕಾರಿ ಸೇವಾ ಸಂಘಗಳಲ್ಲಿ ಒಟ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸದಸ್ಯರ ಸಂಖ್ಯೆ ಎಷ್ಟು ; ಚುನಾಯಿತ ನಿರ್ದೇಶಕರುಗಳ ಸಂಖ್ಯೆ ಎಷ್ಟು ;

(ಇ) ಸಹಕಾರ ಸಂಘ ಸದಸ್ಯರಾದ ಸದಸ್ಯರ ಷೇರು ದರ ಮತ್ತು ಇತ್ತೀಚೆಗೆ ಏರಿಕೆಯಾದ ಷೇರು ದರವನ್ನು ಸರ್ಕಾರದಿಂದ ಭರಿಸಲಾಗುತ್ತಿದೆಯೇ ;

(ಈ) ಹೆಚ್ಚುವರಿ ಷೇರು ದರವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸದಸ್ಯರಿಗೆ ಸರ್ಕಾರ ಬಿಡುಗಡೆ ಮಾಡಿರುವುದೇ ; ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಯಾವಾಗ ಮಾಡಲಾಗಿದೆ ;

(ಉ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸದಸ್ಯರುಗಳಿಗೆ ಸರ್ಕಾರ ನೀಡಬೇಕಾಗಿದ್ದ ಷೇರು ದರದ ವಿಳಂಬದಿಂದಾಗಿ ಪರಿಶಿಷ್ಟ ಜಾರಿ ಮತ್ತು ಪರಿಶಿಷ್ಟ ಪಂಗಡದವರು ಚುನಾವಣೆಯಲ್ಲಿ ಮತ ಚಲಾಯಿಸಲು ವಂಚಿತರಾಗಿರುತ್ತಾರೆಯೇ ; ಹಾಗಿದ್ದಲ್ಲಿ, ಎಷ್ಟು ಮಂದಿ ಸದಸ್ಯರು ಚುನಾವಣೆಯಿಂದ ಅಥವಾ ಮತ ಚಲಾಯಿಸುವುದರಿಂದ ವಂಚಿತರಾಗಿರುತ್ತಾರೆ ?

## ಸಹಕಾರ ಸಂಘಗಳ ವತಿಯಿಂದ ನಿರ್ಮಿಸಿದ ವ್ಯಾಪಾರಿ ಮಳಿಗೆಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೭೯ (೧೬೫೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸಹಕಾರ ಇಲಾಖೆಯಿಂದ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಂದ ಸಿ.ಎಮ್.ಸಿ., ಟಿ.ಎಮ್.ಸಿ., ಎ.ಪಿ.ಎಮ್.ಸಿ., ಟಿ.ಎ.ಪಿ.ಎಮ್.ಸಿ., ವತಿಯಿಂದ ನಿರ್ಮಿಸಿರುವ ವ್ಯಾಪಾರ ಮಳಿಗೆಗಳ ಸಂಖ್ಯೆ ಎಷ್ಟು ;

(ಆ) ಎಲ್ಲೆಲ್ಲಿ ಮತ್ತು ಎಷ್ಟು ಸಂಖ್ಯೆಯಲ್ಲಿ ಸದರಿ ಮಳಿಗೆಗಳನ್ನು ನಿರ್ಮಿಸಲಾಗಿದೆ ;

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಈ ಮಳಿಗೆಗಳ ಹಂಚಿಕೆಯಲ್ಲಿ ಮೀಸಲಾತಿ ಪಾಲಿಸಲಾಗುತ್ತಿದೆಯೇ ;

(ಈ) ಪಾಲಿಸಿದ್ದಲ್ಲಿ, ಎಲ್ಲೆಲ್ಲಿ ಎಷ್ಟೆಷ್ಟು ಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಲಾಗಿದೆ ;

(ಉ) ನೀಡದಿದಲ್ಲಿ, ಸರ್ಕಾರ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮ ಏನು ?

## ಸೋಲಾರ್ ವಿದ್ಯುತ್ ಉತ್ಪಾದನೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೮೦ (೧೬೮೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಉತ್ಪಾದಿಸುವ ಸೋಲಾರ್ ವಿದ್ಯುತ್ ಪ್ರಮಾಣ ಎಷ್ಟು ;

(ಆ) ಸೋಲಾರ್ ವಿದ್ಯುತ್ತನ್ನು ಉತ್ಪಾದಿಸುವ ಕಂಪನಿಗಳು ಯಾವುವು ;

(ಇ) ಸೋಲಾರ್ ವಿದ್ಯುತ್ತನ್ನು ಉತ್ಪಾದಿಸುವ ಕಂಪನಿಗಳಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು ;

(ಈ) ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ವಿದ್ಯುತ್ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹೆದ್ದಾರಿ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಯೋಜನೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೮೧ (೧೬೮೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನ ರಾಜ್ಯ ಹೆದ್ದಾರಿ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಚಿಕ್ಕಮಗಳೂರು ಜಿಲ್ಲೆಯ ಯಾವ ಯಾವ ರಸ್ತೆಯಲ್ಲಿ ಯಾವ ಯಾವ ಭಾಗಗಳನ್ನು ಈ ಯೋಜನೆಯಲ್ಲಿ ಸೇರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮೂಡಿಗೆರೆ ತಾಲ್ಲೂಕಿನ ಗ್ರಾಮೀಣ ರಸ್ತೆಗಳನ್ನು ಲೋಕೋಪಯೋಗಿ ರಸ್ತೆಯಾಗಿ ಮೇಲ್ದರ್ಜೆಗೇರಿಸಲಾಗುವುದೇ ;

(ಈ) ಹಾಗಿದ್ದಲ್ಲಿ, ತಾಲ್ಲೂಕಿನ ಯಾವ ಯಾವ ರಸ್ತೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ?

## ವಿ.ಎಸ್.ಎಸ್.ಎನ್.ಗಳಿಗೆ ಅನುದಾನ ಬಿಡುಗಡೆ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೩೮೨ (೧೬೬೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಹಾಲಿ ಎಷ್ಟು ವ್ಯವಸಾಯ ಸೇವಾ ಸಹಕಾರ (VSSV) ಸಂಘಗಳು ಕಾರ್ಯನಿರ್ವಹಿಸುತ್ತಿವೆ ; ಆ ಪೈಕಿ ನಷ್ಟದಲ್ಲಿರುವ ಮತ್ತು ಲಾಭದಲ್ಲಿರುವ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಸಂಘಗಳಿಗೆ ಸರ್ಕಾರದಿಂದ ಪ್ರತಿವರ್ಷ ಯಾವ ಯಾವ ಯೋಜನೆಗಳಡಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಇ) ಸದರಿ ಸಂಘಗಳ ಬಲವರ್ಧನೆಗೆ ಸರ್ಕಾರ ಹಾಕಿಕೊಂಡ ಅಭಿವೃದ್ಧಿ ಯೋಜನಾ ಕಾರ್ಯಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಲಾಭದಲ್ಲಿರುವ ಒಂದು (VSSV) ಸಂಘವು ಎಷ್ಟು ಜನ ಉದ್ಯೋಗಿಗಳನ್ನು ಯಾವ ಯಾವ ಹುದ್ದೆಗಳಲ್ಲಿ ಯಾವ ರೀತಿ ನೇಮಕ ಮಾಡಿಕೊಳ್ಳಬಹುದು ? (ವಿವರವಾದ ಮಾಹಿತಿ ನೀಡುವುದು)

## I.E.C. ಕಾರ್ಯಕ್ರಮದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೩೮೩ (೧೬೬೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಿಂದ I.E.C. ಕಾರ್ಯಕ್ರಮದಡಿ ವರ್ಷವಾರು ಎಷ್ಟು ಹಣವನ್ನು ಯಾವ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) (KREDL) ಸಂಸ್ಥೆಯು I.E.C. ಕಾರ್ಯಕ್ರಮದಡಿ ಪ್ರತಿ ತಾಲ್ಲೂಕಿನ ತಹಶೀಲ್ದಾರ್ ಕಛೇರಿ (ಮಿನಿ ವಿಧಾನಸೌಧ) ಬಳಿ ಸಂಸ್ಥೆಯ ಜಾಹೀರಾತನ್ನು ಹಾಕಲಾಗಿದೆ ; ಒಂದು ಜಾಹೀರಾತಿಗೆ ಎಷ್ಟು ಹಣ ಖರ್ಚಾಗಿದೆ ; ಒಟ್ಟು ಎಷ್ಟು ಜಾಹೀರಾತುಗಳನ್ನು ಕರ್ನಾಟಕದಲ್ಲಿ ಹಾಕಲಾಗಿದೆ ; ಇದನ್ನು ಅನುಷ್ಠಾನಗೊಳಿಸಿದ ಸಂಸ್ಥೆ ಯಾವುದು ; ಒಟ್ಟು ಇದಕ್ಕೆಲ್ಲಾ ಖರ್ಚಾಗಿರುವ ಹಣವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) (KREDL) ಸಂಸ್ಥೆಯು ಹಿಂದೆ ಇದ್ದಂತಹ ತಾಲ್ಲೂಕು ಕಛೇರಿ ಮತ್ತು ಹೋಬಳಿ ಮಟ್ಟದ ನೆಮ್ಮದಿ ಕೇಂದ್ರಗಳಿಗೆ ಸೋಲಾರ್ ವಿದ್ಯುತ್ ಒದಗಿಸುವ ಯೋಜನೆಯನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆಯೇ ; ಹಾಗಿದ್ದಲ್ಲಿ, ಯೋಜನೆಯ ರೂಪು-ರೇಷೆಗಳೇನು ; ಯೋಜನೆಗೆ ಖರ್ಚಾದ ಹಣವೆಷ್ಟು ? (ವಿವರವಾದ ಮಾಹಿತಿ ನೀಡುವುದು)

## ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪ ಆಧಾರಿತ ನೇಮಕಾತಿ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೩೮೪ (೧೬೬೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರ್ವಜನಿಕ ಉದ್ದಿಮೆ ಅಂದರೆ ಏನು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಲಾಭದ ಉದ್ದೇಶದಿಂದ ಸ್ಥಾಪಿಸಿದ ಸಾರ್ವಜನಿಕ ಉದ್ದಿಮೆಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಸೇವಾ ಉದ್ದೇಶದಿಂದ ಸ್ಥಾಪಿಸಿದ ಸಾರ್ವಜನಿಕ ಉದ್ದಿಮೆಗಳು ಯಾವುದು ; (ವಿವರವಾದ ಮಾಹಿತಿ ನೀಡುವುದು)

(ಈ) ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪ ಆಧಾರದ ಮೇಲೆ ಮಾಡುವ ನೇಮಕಾತಿಗಳನ್ನು ಕಳೆದ ೧೪ ವರ್ಷಗಳಿಂದ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ವಿದ್ಯುತ್ ಘಟಕಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :-**

೧೩೮೫ (೧೬೬೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ವಿವಿಧ ಘಟಕಗಳಲ್ಲಿ ಉತ್ಪಾದಿಸುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ; ಜಿಲ್ಲೆಗಳ ಬೇಡಿಕೆ ಪ್ರಮಾಣ ಎಷ್ಟು : (ವಿವರ ನೀಡುವುದು)

(ಆ) ಜಿಲ್ಲೆಗಳಲ್ಲಿ ಉತ್ಪಾದಿಸುವ ವಿದ್ಯುತ್‌ನ್ನು ಆಯಾ ಜಿಲ್ಲೆಗೆ ಸರಬರಾಜು ಮಾಡಲಾಗುತ್ತಿದೆಯೇ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಷ್ಟು ಮನೆಗಳಿಗೆ ಭಾಗ್ಯಜ್ಯೋತಿ ವಿದ್ಯುತ್ ಸಂಪರ್ಕವನ್ನು ಒದಗಿಸಿಕೊಡಲಾಗಿದೆ ; ಈ ಯೋಜನೆಗೆ ಬಳಕೆಯಾಗುವ ವಿದ್ಯುತ್ ಎಷ್ಟು ; ಎಷ್ಟು ವಿದ್ಯುತ್ ಬಿಲ್ಲು ಇದಕ್ಕೆ ತಗಲಬಹುದಾರ ವಿದ್ಯುತ್ ಮೊತ್ತ ಎಷ್ಟು ;

(ಈ) ರಾಜ್ಯದ್ಯಾಂತ ಭಾಗಜ್ಯೋತಿಯ ಯೋಜನೆಯ ಅಡಿಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಕೋರಲಾದ ಎಷ್ಟು ಅರ್ಜಿಗಳು ಬಾಕಿ ಇವೆ ;

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮತ್ತು ವಿಂಡ್ ಮೂಲಕ ವಿದ್ಯುತ್ ಉತ್ಪಾದನೆಗೆ ಪ್ರೋತ್ಸಾಹ ನೀಡಲಾಗಿದೆಯೇ ? (ವಿವರ ನೀಡುವುದು)

## ರಾಜ್ಯ ಸರ್ಕಾರ ಕ್ರೈಸ್ತ ಅಭಿವೃದ್ಧಿ ಪರಿಷತ್‌ಗೆ ನೀಡಿದ ಅನುದಾನದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :-**

೧೩೮೬ (೧೬೬೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ೨೦೧೪-೧೫ನೇ ಸಾಲಿನಲ್ಲಿ ಕ್ರೈಸ್ತ ಅಭಿವೃದ್ಧಿ ಪರಿಷತ್‌ಗೆ ನೀಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯ ಅಲ್ಪಸಂಖ್ಯಾತ ಪರಿಷತ್ತಿನಿಂದ ೨೦೧೪–೧೫ನೇ ಸಾಲಿನಲ್ಲಿ ಎಷ್ಟು ಫಲಾನುಭವಿಗೆ ಮತ್ತು ಯಾವ ಯಾವ ಉದ್ದೇಶಕ್ಕಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್ತಿಗೆ ರಾಜ್ಯದ ಯಾವ ಯಾವ ಜಿಲ್ಲೆಗಳಿಂದ ಅನುದಾನಕ್ಕಾಗಿ ಬೇಡಿಕೆ ಬಂದಿರುತ್ತದೆ ; ಅನುದಾನ ನೀಡಲು ಪ್ರಗತಿಯಲ್ಲಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್ತನ್ನು ನಿಗಮವನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದುಸ್ಥಿತಿಯಲ್ಲಿರುವ ಸರ್ಕಾರಿ ವಸತಿ ಗೃಹ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :–**

೧೩೮೭ (೧೬೬೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದುಸ್ಥಿತಿಯಲ್ಲಿರುವ ಸರ್ಕಾರಿ ವಸತಿ ಗೃಹಗಳ ಸಂಖ್ಯೆ ಎಷ್ಟು ; ವಾಸಕ್ಕೆ ಯೋಗ್ಯವಲ್ಲದ ವಸತಿ ಗೃಹಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ವಸತಿ ಗೃಹಗಳ ಅಪಾರ್ಟ್‌ಮೆಂಟ್‌ಗಳನ್ನಾಗಿ ರಚನೆ ಮಾಡಲು ಇಲಾಖೆ ಕ್ರಮ ಕೈಗೊಂಡಿದೆಯೇ ;

(ಇ) ನಗರ ವ್ಯಾಪ್ತಿಯಲ್ಲಿರುವ ವಾಸಕ್ಕೆ ಯೋಗ್ಯವಲ್ಲದ ವಸತಿ ಗೃಹಗಳನ್ನು ನೆಲಸಮ ಮಾಡಿ ವಸತಿ ಸಂಕೀರ್ಣವನ್ನು ರಚನೆ ಮಾಡಿದಲ್ಲಿ ಇಲಾಖೆಗೆ ಹಣ ಉಳಿತಾಯವಾಗುವುದರ ಬಗ್ಗೆ ಯೋಚಿಸಲಾಗಿದೆಯೇ ;

(ಈ) ನಗರ ಉರ್ವ ಸ್ಟೋರ್ಸ್‌ನಲ್ಲಿರುವ ಸರ್ಕಾರಿ ವಸತಿ ಗೃಹಗಳಲ್ಲಿ ಎಷ್ಟು ವಸತಿ ಗೃಹಗಳನ್ನು ರಿಪೇರಿ ಮಾಡಲಾಗಿದೆ ; ಎಷ್ಟು ವಸತಿ ಗೃಹಗಳನ್ನು ನೆಲಸಮಗೊಳಿಸಲಾಗಿದೆ ; ಈ ವಸತಿ ಗೃಹಗಳ ದುರಸ್ತಿಗೆ ಖರ್ಚಾದ ಹಣ ಎಷ್ಟು ? (ವಿವರ ನೀಡುವುದು)

## ಮಂಗಳೂರು ವಿಮಾನ ನಿಲ್ದಾಣದ ಸಂಪರ್ಕ ರಸ್ತೆಯ ಮರುವೂರು ಸೇತುವೆ ನಿರ್ಮಾಣ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :-**

೧೩೮೮ (೧೬೬೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ವಿಮಾನ ನಿಲ್ದಾಣದ ಸಂಪರ್ಕ ರಸ್ತೆಯ ಮರವೂರು ಸೇತುವೆ ರಚನೆಯ ಪ್ರಸ್ತಾವನೆ ಯಾವ ಹಂತದಲ್ಲಿದೆ ; ಈ ಸೇತುವೆ ಮತ್ತು ವಿಮಾನ ನಿಲ್ದಾಣ ಸಂಪರ್ಕ ರಸ್ತೆಗೆ ತಗಲುವ ಒಟ್ಟು ವೆಚ್ಚ ಎಷ್ಟು ;

(ಆ) ಮರಕಡದಿಂದ ವಿಮಾನ ನಿಲ್ದಾಣದವರೆಗೆ ರಸ್ತೆ ಅಭಿವೃದ್ಧಿ ಪಡಿಸದೇ ಇರುವುದರಿಂದ ಪ್ರಯಾಣಿಕರಿಗೆ ಉಂಟಾದ ತೊಂದರೆಗಳ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿದೆಯೇ ;

(ಇ) ವಿಮಾನ ನಿಲ್ದಾಣ ರಸ್ತೆಯ ರೈಲ್ವೆ ಅಂಡರ್ ಬ್ರಿಡ್ಜನ್ನು ವಿಸ್ತರಣೆ ಮಾಡಲು ರೈಲ್ವೆ ಇಲಾಖೆ ಮುಂದೆ ಪ್ರಸ್ತಾವನೆ ಮಂಡಿಸಲಾಗಿದೆಯೇ ? (ನೀಡಿದ್ದಲ್ಲಿ ವಿವರ ನೀಡುವುದು)

## ಹೆಚ್ಚುತ್ತಿರುವ ಇಂಧನ ಬೇಡಿಕೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೩೮೯ (೧೬೬೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೩-೧೪ರಲ್ಲಿ ಇದ್ದ ಇಂಧನದ ಬೇಡಿಕೆ ಎಷ್ಟು; ೨೦೧೪-೧೫ರ ಬೇಡಿಕೆ ಎಷ್ಟು ;

(ಆ) ಇಂಧನಕ್ಕೆ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು ನವೀಕರಿಸಬಹುದಾದ ಹಾಗೂ ಇಂಧನದ ಉತ್ಪಾದನೆಯನ್ನು ಹೆಚ್ಚಿಸಲು ಇಲಾಖೆ ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ಸರ್ಕಾರಿ ಕಛೇರಿಗಳು, ಶಾಲಾ-ಕಾಲೇಜು, ಆಸ್ಪತ್ರೆಗಳಲ್ಲಿ ಮತ್ತು ಸಾರ್ವಜನಿಕ ಸಂಸ್ಥೆಗಳಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡಲು ಕಡ್ಡಾಯವಾದ ನಿಯಮ ಪಾಲಿಸಲು ಉದ್ದೇಶಿಸಲಾಗಿದೆಯೇ : ಈ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ವಿದ್ಯುತ್ ಕಳುವು ಮಾಡುತ್ತಿರುವ ಪ್ರಕರಣಗಳಲ್ಲಿ ಶಿಕ್ಷೆ ಪ್ರಮಾಣ ಕಡಿಮೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಲೋಕೋಪಯೋಗಿ ಇಲಾಖೆಯ ವಸತಿಗೃಹಗಳು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೯೦ (೧೬೧೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಸರ್ಕಾರಿ ನೌಕರರಿಗೆ ನೀಡಿರುವ ಲೋಕೋಪಯೋಗಿ ಇಲಾಖೆಯ ವಸತಿಗೃಹಗಳ ಸಂಖ್ಯೆ ಎಷ್ಟು ; (ವರ್ಗಾವಾರು, ವಲಯವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಿಂದ ಈ ವಸತಿಗೃಹಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಹಾಗೂ ಇವುಗಳ ನಿರ್ವಹಣೆಗಾಗಿ ಖರ್ಚು ಮಾಡಿರುವ ಹಣ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸ್ವಂತ ಮನೆ ಹೊಂದಿದ್ದರೂ ಸಹ ಸರ್ಕಾರಿ ವಸತಿಗೃಹಗಳಲ್ಲಿ ವಾಸವಿರುವ ಮತ್ತು ತಮಗೆ ಹಂಚಿಕೆಯಾದ ಮನೆಗಳನ್ನು ಇತರರಿಗೆ ನೀಡಿರುವಂತಹ ಪ್ರಕರಣಗಳೆಷ್ಟಿವೆ ; ಈ ನಿಟ್ಟಿನಲ್ಲಿ ಇಲಾಖೆಯು ಕೈಗೊಂಡಿರುವ ಕ್ರಮಗಳೇನು ;

(ಈ) ಸರ್ಕಾರಿ ವಸತಿ ಗೃಹಗಳನ್ನು ಮತ್ತಷ್ಟೂ ನಿರ್ಮಿಸುವಂತಹ ಯೋಜನೆಗಳು ಸರ್ಕಾರದ ಮುಂದಿವೆಯೇ ?

## ಕಲಬುರಗಿ ಜಿಲ್ಲೆಯ ರಸ್ತೆಗಳು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :-**

೧೩೯೧ (೧೬೦೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ರಸ್ತೆ ಸಂಪರ್ಕಗಳಿಲ್ಲದ ಗ್ರಾಮ, ತಾಂಡ ಕಾಲೋನಿ ಇತ್ಯಾದಿ ಜನವಸತಿ ಪ್ರದೇಶಗಳನ್ನು ಗುರುತಿಸಲಾಗಿದೆಯೇ ; (ಗುರುತಿಸಿದ್ದಲ್ಲಿ ವಿವರ ಒದಗಿಸುವುದು)

(ಆ) ರಸ್ತೆ ಸಂಪರ್ಕಗಳಿಲ್ಲದ ಅಂತಹ ಜನವಸತಿ ಪ್ರದೇಶಗಳಿಗೆ ರಸ್ತೆಗಳನ್ನು ನಿರ್ಮಿಸಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ವಿವರ ಒದಗಿಸುವುದು ; ಇಲ್ಲವಾದಲ್ಲಿ, ಕಾರಣ ತಿಳಿಸುವುದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂಗಳೂರು-59/ಕಾ.ಸೂ. 0 3510/ 1200 ಪ್ರತಿಗಳು/12-03-2015